ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 61 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 11–09–2023 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 61 | Title- Code: KARKAN 28269 | Chitradurga | Date: 11-09-2023 Monday | Page: 4 | Price: Rs. 2-00

ಒಳಪುಟದ ಸುದ್ದಿಗಳು
ವಿವಿಧ ಗ್ರಾಮಗಳಿಗೆ ಜಿಪಂ ಸಿಇಒ ಸೋಮಶೇಖರ್ ದಿಢೀರ್ ಭೇಟಿ 2
ಕಿಡಿಗೇಡಿಗಳ ಕೃತ್ಯ: ಮಾಧ್ಯಮ ಒಕ್ಕೂಟದ ಕಾರ್ಯಕ್ರಮದ ಬ್ಯಾನರ್ ಹರಿದು ಪರಾರಿ 3
ವಿಚ್ಛೇದನಕ್ಕೆ ಅರ್ಜಿಸಲ್ಲಿಸಿದ್ದ ದಂಪತಿ ಒಗ್ಗೂಡಿಸಿದ ನ್ಯಾ.ಶರವಣ್ 4

ಸುದ್ದಿ, ಜಾಹಿರಾತಿಗೆ 9686622252

## ಫಾಸ್ಟ್ ನ್ಯೂಸ್

### ಭಾರತ-ಪಾಕ್ ಕ್ರಿಕೆಟ್ ಪಂದ್ಯ: ಮಳೆ ಸ್ಥಗಿತ



ಕೊಲಂಬೊದಲ್ಲಿ ಮಳೆ ಸ್ಥಗಿತ. ಗ್ರೌಂಡ್ ಸಿಬ್ಬಂದಿಗಳು ಮೈದಾನದಲ್ಲಿನ ನೀರನ್ನು ತೆರವುಗೊಳಿಸುತ್ತಿದ್ದಾರೆ. ಹೀಗಾಗಿ ಪಂದ್ಯ ಶೀಘ್ರದಲ್ಲೇ ಆರಂಭವಾಗುವ ನಿರೀಕ್ಷೆಯಿದೆ.ಒಂದು ವೇಳೆ ಇನ್ನೂ ಅರ್ಧಗಂಟೆ ತಡವಾಗಿ ಪಂದ್ಯ ಆರಂಭವಾದರೆ ಓವರ್‌ಗಳ ಕಡಿತವಾಗುವ ಸಾಧ್ಯತೆ ಹೆಚ್ಚಿದೆ.ಸದ್ಯ ಕ್ರೀಸ್‌ನಲ್ಲಿ ಕೆಎಲ್ ರಾಹುಲ್ (17) ಹಾಗೂ ವಿರಾಟ್ ಕೊಹ್ಲಿ ಬ್ಯಾಟಿಂಗ್ ಕಾಯ್ದುಕೊಂಡಿದ್ದಾರೆ.

**ಪಂದ್ಯ ರದ್ದಾದರೆ ಮುಂದೇನು?:** ಕೊಲಂಬೊದಲ್ಲಿ ನಡೆಯುತ್ತಿರುವ ಭಾರತ–ಪಾಕಿಸ್ತಾನ್ ನಡುವಣ ಪಂದ್ಯವು ಮಳೆಯಿಂದಾಗಿ ಸ್ಥಗಿತಗೊಂಡಿದೆ. ಒಂದು ವೇಳೆ ಇಂದು ಪಂದ್ಯವನ್ನು ನಡೆಸಲು ಸಾಧ್ಯವಾಗದಿದ್ದರೆ ನಾಳೆಗೆ ಮುಂದೂಡಲಾಗುತ್ತದೆ. ಅಂದರೆ ಇವತ್ತು ಎಷ್ಟು ಓವರ್‌ಗಳವರೆಗೆ ಪಂದ್ಯ ನಡೆದಿದೆಯೋ ಅಲ್ಲಿಂದ ನಾಳೆ ಪಂದ್ಯ ಶುರುವಾಗಲಿದೆ. ಹೀಗಾಗಿ ಇಂದು ಸತತ ಮಳೆ ಬಂದರೂ ಮೀಸಲು ದಿನದಾಟದಲ್ಲಿ(ಸೋಮವಾರ) ಪಂದ್ಯವನ್ನು ಮುಂದುವರೆಸಲಾಗುತ್ತದೆ.

# ಅನ್ನಭಾಗ್ಯ ಯೋಜನೆ ಸಮರ್ಪಕ ಅನುಷ್ಠಾನಕ್ಕೆ ಆಹಾರ ಸಚಿವ ಕೆ.ಹೆಚ್. ಮುನಿಯಪ್ಪ ಸೂಚನೆ

» **ಚಿತ್ರದುರ್ಗ**


ಅನ್ನಭಾಗ್ಯ ಯೋಜನೆಯಡಿ ಫಲಾನುಭವಿಗಳಿಗೆ 5 ಕೆ.ಜಿ. ಅಕ್ಕಿಯ ಬದಲು ರೂ. ಗಳ ಮೊತ್ತವನ್ನು ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುತ್ತಿದ್ದು, ಜಿಲ್ಲೆಯಲ್ಲಿ ಯೋಜನೆಯ ಅನುಷ್ಠಾನವನ್ನು ಸಮರ್ಪಕವಾಗಿ ಕೈಗೊಳ್ಳಬೇಕು ಎಂದು ರಾಜ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್. ಮುನಿಯಪ್ಪ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಭಾನುವಾರದಂದು ಹೊಸದುರ್ಗ ತಾಲ್ಲೂಕು ಮಾದಿಗ ಸಮಾಜದ ಬಿ.ಜಿ. ಅಭಿಮಾನಿ ಬಳಗದ ವತಿಯಿಂದ ಹೊಸದುರ್ಗದ ಅಶೋಕ ರಂಗಮಂದಿರ ಆವರಣದಲ್ಲಿ ಏರ್ಪಡಿಸಲಾಗಿದ್ದ ಅಭಿನಂದನೆ ಹಾಗೂ ಸನ್ಮಾನ ಸಮಾರಂಭದಲ್ಲಿ ಭಾಗವಹಿಸಲು ಆಗಮಿಸಿದ ಸಂದರ್ಭದಲ್ಲಿ, ಕಾರ್ಯಕ್ರಮಕ್ಕೆ ತೆರಳುವುದಕ್ಕೂ ಮುನ್ನ ಹೊಸದುರ್ಗದ ಪ್ರವಾಸಿ ಮಂದಿರದಲ್ಲಿ ಅನ್ನಭಾಗ್ಯ ಯೋಜನೆ ಅನುಷ್ಠಾನದ ಬಗ್ಗೆ ಆಹಾರ ಇಲಾಖೆ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.



ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ 100 ದಿನಗಳ ಒಳಗಾಗಿ ಈಗಾಗಲೆ ನಾಲ್ಕು ಗ್ಯಾರಂಟಿ ಯೋಜನೆಗಳಾದ ಅನ್ನಭಾಗ್ಯ, ಶಕ್ತಿ, ಗೃಹಲಕ್ಷ್ಮಿ ಹಾಗೂ ಗೃಹಜ್ಯೋತಿ ಯೋಜನೆಗಳನ್ನು ಜಾರಿಗೊಳಿಸಿ, ನೀಡಿದ ಭರವಸೆಯನ್ನು ಈಡೇರಿಸಿದ್ದೇವೆ. ಅದೇ ರೀತಿ ಯುವಜನತೆಗಾಗಿ ಜಾರಿಗೊಳಿಸ ಲಾಗುತ್ತಿರುವ ಯುವನಿಧಿ ಯೋಜನೆಯನ್ನು ಕೂಡ ಬರುವ ಡಿಸೆಂಬರ್ ತಿಂಗಳಲ್ಲಿ ಜಾರಿಗೊಳಿಸುತ್ತೇವೆ ಎಂದರು. ಅನ್ನಭಾಗ್ಯ ಯೋಜನೆಯಡಿ ಜಿಲ್ಲೆಯಲ್ಲಿ ಒಟ್ಟು 3,37,084 ಫಲಾನುಭವಿಗಳಿಗೆ 05 ಕೆ.ಜಿ. ಅಕ್ಕಿಯನ್ನು ಉಚಿತವಾಗಿ ವಿತರಿಸುತ್ತಿರುವುದರ ಜೊತೆಗೆ, ಹೆಚ್ಚುವರಿ 05 ಕೆ.ಜಿ. ಅಕ್ಕಿಯ ಬದಲಿಗೆ ಪ್ರತಿ ಫಲಾನುಭವಿಗೆ ನೀಡಲಾಗುತ್ತಿರುವ ರೂ. 170 ಗಳನ್ನು ಡಿಬಿಟಿ ಮೂಲಕ ನೇರವಾಗಿ ಫಲಾನುಭವಿಯ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುತ್ತಿದೆ. ರಾಜ್ಯದಲ್ಲಿ 3.61 ಕೋಟಿ ಫಲಾನುಭವಿಗಳಿಗೆ 598.62 ಕೋಟಿ ರೂ. ಮೊತ್ತವನ್ನು ಡಿಬಿಟಿ ಮೂಲಕ ಜಮಾ ಮಾಡಲಾಗಿದ್ದು, ಚಿತ್ರದುರ್ಗ ಜಿಲ್ಲೆಯಲ್ಲಿ 11.45 ಲಕ್ಷ ಫಲಾನುಭವಿಗಳಿಗೆ 19.47 ಕೋಟಿ ರೂ. ಗಳನ್ನು ಡಿಬಿಟಿ ಮೂಲಕ ಪಾವತಿಸಲಾಗಿದೆ. ಜಿಲ್ಲೆಯಲ್ಲಿ ಯಾವುದೇ ಗೊಂದಲಗಳಿಗೆ ಅವಕಾಶ ಕಲ್ಪಿಸದಂತೆ ಸಮರ್ಪಕವಾಗಿ ಯೋಜನೆ ಅನುಷ್ಠಾನಗೊಳಿಸಬೇಕು ಎಂದು ಸಚಿವ ಕೆ.ಹೆಚ್. ಮುನಿಯಪ್ಪ ಅವರು ಅಧಿಕಾರಿಳಿಗೆ ಸೂಚನೆ ನೀಡಿದರು.ಹೊಸದುರ್ಗ ಶಾಸಕ ಬಿ.ಜಿ. ಗೋವಿಂದಪ್ಪ, ಮಾಜಿ ಸಂಸದ ಚಂದ್ರಪ್ಪ,ಆಹಾರ ಇಲಾಖೆ ಜಂಟಿ ನಿರ್ದೇಶಕ ಮಧುಸೂಧನ್, ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್ ಇದ್ದರು.

# ಸದ್ಯದಲ್ಲಿಯೇ ಸದಾಶಿವ ಆಯೋಗ ವರದಿ ಜಾರಿ: ಸಚಿವ ಮುನಿಯಪ್ಪ



» **ಹೊಸದುರ್ಗ**

ಶೋಷಿತ ವರ್ಗಗಳು ಪ್ರಗತಿ ಕಾಣಬೇಕಾದರೆ, ಸದಾಶಿವ ಆಯೋಗ ಜಾರಿಗೆ ಬರಬೇಕು. ಕಳೆದ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿಯೇ, ಆಯೋಗದ ವರದಿ ಜಾರಿ ಮಾಡಬೇಕೆಂದು ತೀರ್ಮಾನಿಸಲಾಗಿತ್ತು. ಆದರೆ, ಚುನಾವಣೆ ಹತ್ತಿರ ಬಂದ ಕಾರಣ ಮಾಡಲಾಗಲಿಲ್ಲ. ಈ ಬಗ್ಗೆ ಈಗಾಗಲೇ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಸಂಪುಟ ಸಹೋದ್ಯೋಗಿಗಳೊಂದಿಗೆ ಚರ್ಚೆ ನಡೆಸಿದ್ದು, ಶೀಘ್ರವೇ ಸದಾಶಿವ ಆಯೋಗದ ವರದಿ ಜಾರಿಗೆ ಬರಲಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸಚಿವ ಕೆ. ಹೆಚ್.ಮುನಿಯಪ್ಪ ಹೇಳಿದರು.

ಪಟ್ಟಣದ ಅಶೋಕ ರಂಗಮಂದಿರದಲ್ಲಿ ಭಾನುವಾರ ಹೊಸದುರ್ಗ ತಾಲೂಕು ಮಾದಿಗ ಸಮಾಜದ ಬಿ.ಜಿ.ಅಭಿಮಾನಿ ಬಳಗದ ವತಿಯಿಂದ ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸದಾಶಿವ ಆಯೋಗದ ವರದಿಯನ್ನು ಜಾರಿಗೆ ತಂದರೆ, ಭೋವಿ, ಕೊರಮ, ಕೊರಚ, ಲಂಬಾಣಿ ಹಾಗೂ ಇನ್ನಿತರ ಜನಾಂಗಗಳಿಗೆ ಮೋಸ ಮಾಡಿದಂತಾಗುತ್ತದೆ ಎಂದು ಕೆಲವರು ಅಪಪ್ರಚಾರ ಮಾಡುತ್ತಿದ್ದಾರೆ. ಎಲ್ಲಾ ಸಮುದಾಯಗಳ ಸ್ಥಿತಿಗತಿ ಮತ್ತು ಪ್ರಗತಿಯನ್ನು ಗಮನದಲ್ಲಿಟ್ಟುಕೊಂಡು ಸದಾಶಿವ ಆಯೋಗವನ್ನು ಜಾರಿ ಮಾಡಿಯೇ ತೀರುತ್ತೇವೆ ಎಂದು ಸಮುದಾಯದ ಜನರಿಗೆ ಭರವಸೆ ನೀಡಿದರು.

ಕಳೆದಬಾರಿ ಸಿದ್ದರಾಮಯ್ಯನವರ ನೇತೃತ್ವದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗ, ಅನ್ನ ಭಾಗ್ಯ ಮತ್ತು ಇತರ ಭಾಗ್ಯಗಳನ್ನು ಜಾರಿಗೆ ತಂದು ಜನ ಪರವಾಗಿ ಕೆಲಸ ಮಾಡಲಾಗಿತ್ತು. 2018 ರಲ್ಲಿ ಅತಂತ್ರ ಫಲಿತಾಂಶ ಬಂದಿದ್ದರಿಂದ ಹೈಕಮಾಂಡ್ ತೀರ್ಮಾನದಂತೆ ಜೆಡಿಎಸ್ ಪಕ್ಷದ ಕುಮಾರಸ್ವಾಮಿಯನ್ನು ಮುಖ್ಯಮಂತ್ರಿ ಮಾಡಲಾಯಿತು.

ಪುಟ 2

### ಡಿಸೆಂಬರ್ ತಿಂಗಳಲ್ಲಿ ಯುವನಿಧಿ ಜಾರಿ

ಕಾಂಗ್ರೆಸ್ ಪಕ್ಷ ಚುನಾವಣಾ ಪೂರ್ವ ಕೊಟ್ಟಂತ ಭರವಸೆ ಮತ್ತು ಗ್ಯಾರಂಟಿಗಳನ್ನು ಒಂದೊಂದಾಗಿ ಈಡೇರಿಸುತ್ತಾ ಬರುತ್ತಿದೆ. ಈಗಾಗಲೇ, ಗೃಹಜ್ಯೋತಿ, ಗೃಹಲಕ್ಷ್ಮಿ, ಶಕ್ತಿ ಯೋಜನೆ ಮತ್ತು ಅನ್ನಭಾಗ್ಯ ಯೋಜನೆ ಜಾರಿಯಾಗಿದ್ದು, ಡಿಸೆಂಬರ್ ತಿಂಗಳಿಂದ ಯುವನಿಧಿ ಯೋಜನೆಯೂ ಜಾರಿಗೆ ಬರಲಿದೆ.

» **ಕೆ.ಹೆಚ್.ಮುನಿಯಪ್ಪ ಆಹಾರ ಮತ್ತು ನಾಗರಿಕ ಸರಬರಾಜು ಸಚಿವರು, ಕರ್ನಾಟಕ ಸರ್ಕಾರ.**

### ಜಾತಿನಿಂದನೆ ಕೇಸ್ ದುರುಪಯೋಗ ಮಾಡಬೇಡಿ

ನಿಮಗೆ ಅನ್ಯಾಯವಾದಾಗ ಹೋರಾಟ ಮಾಡಿ. ಆದರೆ, ಸುಖ ಸುಮ್ಮನೆ ಇನ್ನೊಬ್ಬರ ಮೇಲೆ ಜಾತಿನಿಂದಲೇ ಕೇಸ್ ಮಾಡಬೇಡಿ. ಕೆಲವರು ನಿಮ್ಮನ್ನು ಬಳಸಿಕೊಂಡು ಅವರ ಸೇಡು ತೀರಿಸಿಕೊಳ್ಳುತ್ತಾರೆ. ನಿಮ್ಮಿಂದ ಅಟ್ರಾಸಿಟಿ ಕೇಸ್ ಮಾಡಿಸುತ್ತಾರೆ. ಇಂತವುಗಳಿಂದ ಅಟ್ರಾಸಿಟಿ ಕೇಸ್ ಮಹತ್ವ ಕಳೆದುಕೊಳ್ಳುತ್ತಿದೆ. ಈ ವರ್ತನೆಯಿಂದಾಗಿ ಬೇರೆ ಸಮುದಾಯದವರು ನಿಮ್ಮಿಂದ ದೂರ ಉಳಿಯುತ್ತಾರೆ. ಆಗ ನೀವುಗಳು ಪ್ರಗತಿ ಕಾಣಲು ಸಾಧ್ಯವಿಲ್ಲ.

» **ಆರ್.ಬಿ. ತಿಮ್ಮಾಪುರ ಅಬಕಾರಿ ಸಚಿವರು,ಕರ್ನಾಟಕ ಸರ್ಕಾರ.**

### ಅರ್ಹ ಫಲಾನುಭವಿಗಳಿಗೆ ಬಗರ್ ಹುಕ್ಕುಂ ಸಾಗುವಳಿ

ಬಗರ್ ಹುಕ್ಕಂ ಮಾಡಿರುವವರು ಸಾಗುವಳಿ ಮಾಡಿಸಲು ಯಾರ ಹತ್ತಿರವೂ ಹೋಗಬೇಡಿ. ಮೂರು ತಿಂಗಳ ನಂತರ ಕಮಿಟಿ ಅಸ್ತಿತ್ವಕ್ಕೆ ಬಂದಾದ ಮೇಲೆ, ಸ್ವತಹ ನಾವೇ ನಿಮ್ಮ ಮನೆಯ ಬಾಗಿಲಿಗೆ ಬಂದು ಅರ್ಹರನ್ನು ಗುರುತಿಸಿ, ಪರಿಶೀಲಿಸಿ ಸಾಗುವಳಿ ಪತ್ರ ನೀಡುತ್ತೇವೆ. ಯಾರಿಗೆ ಗೃಹಲಕ್ಷ್ಮಿ ಯೋಜನೆಯ ಹಣ ತಲುಪಿಲ್ಲವೋ, ಅಂತಹ ಫಲಾನುಭವಿಗಳಿಗೆ ಹಣ ತಲುಪಿಸುವ ಕೆಲಸ ಮಾಡುತ್ತೇನೆ.

» **ಬಿ.ಜಿ.ಗೋವಿಂದಪ್ಪ ಶಾಸಕರು, ಹೊಸದುರ್ಗ**

# ಇಂದು ಕೇಂದ್ರ ಸಚಿವ ಎ. ನಾರಾಯಣಸ್ವಾಮಿ ಅವರಿಂದ ನನ್ನ ಮಣ್ಣು ನನ್ನ ದೇಶ ಉದ್ಘಾಟನೆ



» **ಚಿತ್ರದುರ್ಗ**

ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವರು ಹಾಗೂ ಸಂಸದರಾದ ಎ. ನಾರಾಯಣಸ್ವಾಮಿ ಅವರು ಸೆ. 11 ರಂದು ಚಿತ್ರದುರ್ಗ ಜಿಲ್ಲೆಯಲ್ಲಿ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ.ಸಚಿವರು ಅಂದು ಬೆಳಿಗ್ಗೆ 11 ಗಂಟೆಗೆ ಚಿತ್ರದುರ್ಗ ನಗರದ ಜೆ.ಸಿ.ಆರ್. ಬಡಾವಣೆ ಹತ್ತಿರದ ಗಣೇಶ ದೇವಸ್ಥಾನದ ಬಳಿ "ನನ್ನ ಮಣ್ಣು ನನ್ನ ದೇಶ" ಕಾರ್ಯಕ್ರಮದ ಉದ್ಘಾಟನೆ ನೆರವೇರಿಸುವರು. ಬಳಿಕ ಮಧ್ಯಾಹ್ನ 01 ಗಂಟೆಗೆ ಚಳ್ಳಕೆರೆಗೆ ತೆರಳಿ, ಇಲ್ಲಿನ ವೀರಭದ್ರೇಶ್ವರ ದೇವಸ್ಥಾನದ ಬಳಿ "ನನ್ನ ಮಣ್ಣು ನನ್ನ ದೇಶ" ಕಾರ್ಯಕ್ರಮದ ಉದ್ಘಾಟನೆ ಮಾಡುವರು ಎಂದು ಸಚಿವರ ಆಪ್ತ ಸಹಾಯಕರು ತಿಳಿಸಿದ್ದಾರೆ.




ಗೌರವಾನ್ವಿತ 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಚಿತ್ರದುರ್ಗ.
ಸಿ.ಆರ್.ಮಿಸ್.ಸಂಖ್ಯೆ: 847/2023

**ಅರ್ಜಿದಾರರು:**

1) ರಘು ಚಿಂತನ್. ಎನ್ ಬಿನ್ ನಿಂಗಪ್ಪ. ಎಮ್, ವಯಸ್ಸು ಸುಮಾರು 19 ವರ್ಷ, ವಾಸ: ನರೇನಹಾಳ್ ಗ್ರಾಮ, ಜೆ.ಎನ್. ಕೋಟೆ ಅಂಚೆ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ. 2) ಶಾಲಿನಿ. ಎನ್ ಬಿನ್ ನಿಂಗಪ್ಪ. ಎಮ್, ವಯಸ್ಸು ಸುಮಾರು 15 ವರ್ಷ, ವಾಸ: ವಾಗ್ದೇವಿ ಶಾಲೆ ಹಿಂಭಾಗ, ಹಿರಿಯೂರು.

2ನೇ ಅರ್ಜಿದಾರರು ಅಪ್ರಾಪ್ತ ವಯಸ್ಕರಾಗಿದ್ದು ಅವರ ಪರವಾಗಿ ಅವರ ಅಣ್ಣ 1ನೇ ಅರ್ಜಿದಾರರು ಪ್ರತಿನಿದಿಸಲ್ಪಡುವರು.

**:ವಿರುದ್ಧ:**

ಎದುರುದಾರರು: ತಹಶೀಲ್ದಾರ್ / ಜನನ ಮತ್ತು ಮರಣ ನೋಂದಣಾಧಿಕಾರಿಗಳು, ತಾಲ್ಲೂಕು ಕಛೇರಿ, ಚಿತ್ರದುರ್ಗ.

**ಸಾರ್ವಜನಿಕ ಪ್ರಕಟಣೆ**

ಈ ಮೂಲಕ ತಿಳಿಯಪಡಿಸುವುದೇನೆಂದರೆ, ಈ ಮೇಲ್ಕಂಡ ಅರ್ಜಿದಾರರು, ಎದುರುದಾರರ ವಿರುದ್ಧ ಮಾನ್ಯ ಘನ ನ್ಯಾಯಾಲಯದಲ್ಲಿ 1 ಮತ್ತು 2ನೇ ಅರ್ಜಿದಾರರ ಅಜ್ಜ ಮೈಲಾರಪ್ಪ ಬಿನ್ ಯಲ್ಲಪ್ಪ ಇವರು ದಿನಾಂಕ: 20.06.1975 ರಂದು ತಮ್ಮ ಊರಾದ ನರೇನಹಾಳ್ ಗ್ರಾಮ, ಜೆ.ಎನ್. ಕೋಟೆ ಅಂಚೆ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆಯಲ್ಲಿ ಮರಣ ಹೊಂದಿದ್ದು ಕುಟುಂಬದ ಆಸ್ತಿಗಳ ಖಾತೆ ಮೂಲಕ ಹಕ್ಕು ಬದಲಾವಣೆ ಮತ್ತು ಇತರೆ ಸೌಲಭ್ಯಗಳನ್ನು ಪಡೆಯುವ ಸಲುವಾಗಿ ನ್ಯಾಯಾಲಯದ ಮೂಲಕ ಸದರಿ ಮೈಲಾರಪ್ಪ ಬಿನ್ ಯಲ್ಲಪ್ಪ ರವರ ಮರಣ ಪ್ರಮಾಣ ಪತ್ರವನ್ನು ಪಡೆಯಲು ಈ ಅರ್ಜಿಯನ್ನು ನ್ಯಾಯಾಲಯದಲ್ಲಿ ಸಲ್ಲಿಸಿರುತ್ತಾರೆ. ಈ ವಿಷಯದ ಬಗ್ಗೆ ಈ ಅರ್ಜಿಯಲ್ಲಿ ತಿಳಿಸಿರುವ ಅರ್ಜಿದಾರರನ್ನು ಬಿಟ್ಟು ಬೇರೆ ವಾರಸುದಾರರು ತಕರಾರು ಸಲ್ಲಿಸುವವರಿದ್ದರೆ ನ್ಯಾಯಾಲಯದಲ್ಲಿ ಮುದ್ದತ್ತು ದಿನಾಂಕ: 07.10.2023 ರಂದು ಬೆಳಿಗ್ಗೆ 11:00 ಗೆ ಈ ಕೇಸಿನಲ್ಲಿ ಖುದ್ದಾಗಿ ಆಗಲೀ ಅಥವಾ ತಮ್ಮ ವಕೀಲರ ಮುಖಾಂತರವಾಗಲೀ ನ್ಯಾಯಾಲಯಕ್ಕೆ ಹಾಜರಾಗಿ ತಮ್ಮ ತಕರಾರನ್ನು ಸಲ್ಲಿಸತಕ್ಕದ್ದು, ತಪ್ಪಿದ್ದಲ್ಲಿ ಈ ಮೇಲ್ಕಂಡ ಅರ್ಜಿಯನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ಎಂದು ತಿಳಿಯಿರಿ.

ನ್ಯಾಯಾಲಯದ ಮುದ್ರೆ ಮತ್ತು ನನ್ನ ಸಹಿಯೊಂದಿಗೆ ದಿನಾಂಕ: 08.09.2023 ರಂದು ನೀಡಲಾಗಿದೆ.

ಸಹಿ/– ಶಿರಸ್ತೆದಾರರು, ಗೌರವಾನ್ವಿತ 1ನೇ ಕಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ., ಚಿತ್ರದುರ್ಗ.

ಸಹಿ/– ಸಿ. ತಿಮ್ಮಣ್ಣ, ಅರ್ಜಿದಾರರ ಪರ ವಕೀಲರು, ಚಿತ್ರದುರ್ಗ.
ದಿನಾಂಕ: 08.09.2023.



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5500 |
| 85 ಕೆಡಿಎಂ (ಗ್ರಾಂ) | 5100 |



| ಬೆಳ್ಳಿ ಬೆಲೆ | |
|---|---|
| ಕೆಜಿ | 63500 |



## ಫಾಸ್ಟ್ ನ್ಯೂಸ್

### ಜೆಡಿಎಸ್ ಮತ್ತು ಬಿಜೆಪಿ ಮೈತ್ರಿಗೆ ನನ್ನ ಸಹಮತವಿಲ್ಲ

ಯಾದಗಿರಿ: ಮುಂಬರುವ ಲೋಕಸಭೆ ಚುನಾವಣೆಗೆ ಜೆಡಿಎಸ್ ಹಾಗೂ ಬಿಜೆಪಿ ಜೊತೆ ಜೊತೆಯಾಗಿ ಕಾಂಗ್ರೆಸ್ ವಿರುದ್ಧ ಕಣಕ್ಕಿಳಿಯಲು ಸಿದ್ಧತೆಗಳು ನಡೆದಿವೆ. ಜೆಡಿಎಸ್ ಹಾಗೂ ಬಿಜೆಪಿ ಮೈತ್ರಿ ಬಗ್ಗೆ ಈಗಾಗಲೇ ಬಿಜೆಪಿ ಹೈಕಮಾಂಡ್ ನಾಯಕರ ಜೊತೆ ಮಾತುಕತೆಗಳು ಸಹ ಮುಗಿದಿವೆ. ಖುದ್ದು ಜೆಡಿಎಸ್ ವರಿಷ್ಠ ಹೆಚ್.ಡಿ ದೇವೇಗೌಡರ ಕಾರ್ಯಕರ್ತರ ಮುಂದೆ ಪರೋಕ್ಷವಾಗಿ ಮೈತ್ರಿಯ ಮಾತುಗಳನ್ನ ಆಡಿದ್ದಾರೆ. ಆದ್ರೆ, ಬಿಜೆಪಿಯೊಂದಿಗೆ ಹೋಗುವುದಕ್ಕೆ ಜೆಡಿಎಸ್‌ನಲ್ಲೇ ಅಸಮಾಧಾನ ಸ್ಫೋಟವಾಗಿದೆ. ಬಿಜೆಪಿಯೊಂದಿಗೆ ಮೈತ್ರಿಗೆ ಕೆಲ ಜೆಡಿಎಸ್ ಶಾಸಕರು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಅದರಲ್ಲೂ ಪ್ರಮುಖವಾಗಿ ಜೆಡಿಎಸ್ ಶಾಸಕ ಶರಣಗೌಡ ಕಂದಕೂರು ಬಹಿರಂಗವಾಗಿಯೇ ವಿರೋಧ ವ್ಯಕ್ತಪಡಿಸಿದ್ದು, ಇಂದಿನ ಬೆಂಗಳೂರು ಜೆಡಿಎಸ್ ಸಮಾವೇಶಕ್ಕೆ ಗೈರಾಗಿದ್ದಾರೆ. ಇದರೊಂದಿಗೆ ತಮ್ಮ ಅಸಮಾಧಾನ ಹೊರಹಾಕಿದ್ದಾರೆ.

### ಸಂಸದ ಪ್ರತಾಪ್ ಸಿಂಹ ಒಬ್ಬ ಪೊಲಿಟಿಕಲ್ ಟೆರರಿಸ್ಟ್: ಮಹೇಶ್ ಚಂದ್ರ

ಮೈಸೂರು : ಸಂಸದ ಪ್ರತಾಪ್ ಸಿಂಹ ಒಬ್ಬ ಪೊಲಿಟಿಕಲ್ ಟೆರರಿಸ್ಟ್ ಹೀಗೆ ಎಂದು ಪ್ರೊ. ಮಹೇಶ್ ಚಂದ್ರ ಗುರು ವಾಗ್ದಾಳಿ ಮಾಡಿದ್ದಾರೆ. ನಗರದ ಮಾನಸ ಗಂಗೋತ್ರಿಯಲ್ಲಿ ನಡೆದ ಮಹಿಷ ದಸರಾ ವಿಚಾರ ಸಂಕಿರಣದಲ್ಲಿ ಮಾತನಾಡಿದ ಅವರು, ಪ್ರತಾಪ್ ಸಿಂಹ ನನ್ನ ಶಿಷ್ಯ. ಅವರ ತಂದೆ ಹರಿದ ಬಟ್ಟೆಯಲ್ಲಿ ನೋಡಲು ಬಂದಾಗ ತಂದೆಯನ್ನೇ ಜೀತದ ಆಳು ಎಂದಿದ್ದ. ಆ ಸಂದರ್ಭದಲ್ಲಿ ನಾನು ಥಳಿಸಿ ಬುದ್ದಿ ಹೇಳಿದ್ದೆ. ಪ್ರತಾಪ ಸಿಂಹ ಒಳ್ಳೆಯವರಿಗೆ ಹುಟ್ಟಿಲ್ಲ. ಈ ಸಮಯದಲ್ಲಿ ಪಾಪಿಗಳನ್ನು ಏಕೆ ನೆನೆಸಿಕೊಳ್ಳುವುದು ಎಂದು ಹೇಳಿದ್ದಾರೆ.

### ಗೆಳೆಯನ ಸಿನಿಮಾದಲ್ಲಿ ಪ್ರಭಾಸ್ ಪಾತ್ರ, ಸಿನಿಮಾ ಸಾಮಾನ್ಯದ್ದಲ್ಲ

ಪ್ರಭಾಸ್ ಕಣ್ಣಪ್ಪನ ಕುರಿತಾದ ಕತೆಯಲ್ಲಿ ನಟ ಪ್ರಭಾಸ್ ಅತಿಥಿ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಕಣ್ಣಪ್ಪನ ಪಾತ್ರದಲ್ಲಿ ನಟಿಸಬೇಕು ಎಂಬುದು ಪ್ರಭಾಸ್ ಆಸೆಯಾಗಿತ್ತು, ಆದರೆ ಈಗ ಗೆಳೆಯನ ಸಿನಿಮಾದಲ್ಲಿ ಅತಿಥಿ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಶಿವನ ಅಪ್ರತಿಮ ಭಕ್ತನಾದ ಕಣ್ಣಪ್ಪ ಅಥವಾ ಬೇಡರ ಕಣ್ಣಪ್ಪನ ಚರಿತ್ರೆಯನ್ನು ತೆರೆಯ ಮೇಲೆ ತರಲಾಗುತ್ತಿದ್ದು, ತೆಲುಗಿನ ನಟ ವಿಷ್ಣು ಮಂಚು ಕಣ್ಣಪ್ಪನ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಕಳೆದ ತಿಂಗಳು 'ಕಣ್ಣಪ್ಪ' ಚಿತ್ರದ ಮುಹೂರ್ತ ಶಿವನ ದೇವಾಲಯದಲ್ಲಿ ಅದ್ದೂರಿಯಾಗಿ ನೆರವೇರಿದೆ. ಸಿನಿಮಾದ ಚಿತ್ರೀಕರಣ ಈಗಾಗಲೇ ಪ್ರಾರಂಭವಾಗಿದ್ದು ವಿಷ್ಣು ಮಂಚು ಶ್ರದ್ಧೆ ಮತ್ತು ಸಮರ್ಪಣಾ ಭಾವದಿಂದ ಸಿನಿಮಾದ ಚಿತ್ರೀಕರಣದಲ್ಲಿ ತೊಡಗಿಕೊಂಡಿದ್ದಾರೆ. ಶಿವ ಭಕ್ತ ಕಣ್ಣಪ್ಪನ ಕತೆ ಈ ಹಿಂದೆಯೂ ಕೆಲವು ಬಾರಿ ತೆರೆಗೆ ಬಂದಿದೆಯಾದರೂ ಈಗ ಮತ್ತೊಮ್ಮೆ ಆಧುನಿಕ ತಂತ್ರಜ್ಞಾನಗಳ ಬಳಸಿಕೊಂಡು ತೆರೆಗೆ ಬರುತ್ತಿದೆ. ಭಾರತದ ದೊಡ್ಡ ಸೂಪರ್ ಸ್ಟಾರ್ ಪ್ರಭಾ ಈಗ ಈ ಸಿನಿಮಾದ ಭಾಗವಾಗಿದ್ದಾರೆ. ಕಣ್ಣಪ್ಪನ ಚರಿತ್ರೆಯ ಸಿನಿಮಾದಲ್ಲಿ ನಟ ಪ್ರಭಾ ಒಂದು ವಿಶೇಷ ಮತ್ತು ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಮೂಲಗಳ ಪ್ರಕಾರ, ಪ್ರಭಾಸ್ ಅವರು ಶಿವನ ಪಾತ್ರದಲ್ಲಿ ನಟಿಸುತ್ತಿದ್ದಾರೆ ಎನ್ನಲಾಗುತ್ತಿದೆ. ಪ್ರಭಾಸ್ ಸೇರ್ಪಡೆಯು ಈ ಚಿತ್ರಕ್ಕಾಗಿ ಕಾಯುತ್ತಿರುವ ಪ್ರೇಕ್ಷಕರ ಕುತೂಹಲ ಮತ್ತು ನಿರೀಕ್ಷೆಗಳನ್ನು ದುಪ್ಪಟ್ಟು ಮಾಡಿದೆ. 'ಕಣ್ಣಪ್ಪ' ಸಿನಿಮಾದಲ್ಲಿ ಪ್ರಭಾ ಯಾವ ಪಾತ್ರದಲ್ಲಿ ನಟಿಸಲಿದ್ದಾರೆ ಎಂಬುದನ್ನು ಚಿತ್ರತಂಡ ಬಹಿರಂಗವಾಗಿ ಹೇಳಿಲ್ಲವಾದರೂ, ಪ್ರಭಾಸ್ ಶಿವನ ಪಾತ್ರದಲ್ಲಿ ನಟಿಸಲಿದ್ದಾರೆ ಎನ್ನಲಾಗುತ್ತಿದೆ. ಕಣ್ಣಪ್ಪನ ಪಾತ್ರದಲ್ಲಿ ತಾವು ನಟಿಸಬೇಕು ಎಂಬ ಆಸೆಯನ್ನು ಪ್ರಭಾಸ್ ಇರಿಸಿಕೊಂಡಿದ್ದರು, ಆದರೆ ಈಗ ಮಂಚು ವಿಷ್ಣು ಆ ಪಾತ್ರದಲ್ಲಿ ನಟಿಸುತ್ತಿದ್ದು, ಪ್ರಭಾಸ್ ಅತಿಥಿ ಪಾತ್ರದಲ್ಲಿ ನಟಿಸಲಿದ್ದಾರೆ. ಪ್ರಭಾಸ್ ಪ್ರಸ್ತುತ 'ಸಲಾರ್' ಹಾಗೂ 'ಕಲ್ಕಿ' ಸಿನಿಮಾಗಳಲ್ಲಿ ನಟಿಸುತ್ತಿದ್ದಾರೆ. 'ಸಲಾರ್' ಸಿನಿಮಾ ಇದೇ ತಿಂಗಳು 17ಕ್ಕೆ ಬಿಡುಗಡೆ ಆಗಬೇಕಿತ್ತು, ಆದರೆ ಸಿನಿಮಾದ ಬಿಡುಗಡೆ ಮುಂದಕ್ಕೆ ಹೋಗಿದೆ. ಇನ್ನು 'ಕಲ್ಕಿ' ಸಿನಿಮಾ ಮುಂದಿನ ವರ್ಷ ತೆರೆಗೆ ಬರುತ್ತಿದೆ. ಅದಾದ ಬಳಿಕ ಮಾರುತಿ ನಿರ್ದೇಶನದ ಸಿನಿಮಾದಲ್ಲಿ ಪ್ರಭಾಸ್ ನಟಿಸಲಿದ್ದಾರೆ. ಆ ಸಿನಿಮಾದ ಬಳಿಕ ಸಿದ್ಧಾರ್ಥ್ ಆನಂದ್ ನಿರ್ದೇಶನದ ಹಿಂದಿ ಸಿನಿಮಾದಲ್ಲಿ ಪ್ರಭಾಸ್ ಕಾಣಿಸಿಕೊಳ್ಳಲಿದ್ದಾರೆ.

### ಮಾಜಿ ಸಂಸದರ ಪತ್ನಿ ಸರ ಎಗರಿಸಿದ ಕಳ್ಳರು

ಉತ್ತರ ಕನ್ನಡ: ನೀರು ಕೇಳುವ ನೆಪದಲ್ಲಿ ಬಂದು ಮಾಜಿ ಸಂಸದರ ಪತ್ನಿಯ ಕುತ್ತಿಗೆಯಲ್ಲಿದ್ದ ಚಿನ್ನದ ಸರ ಎಗರಿಸಿದ ಘಟನೆ ಸೆಪ್ಟೆಂಬರ್ 6ರಂದು ಉತ್ತರ ಕನ್ನಡ ಜಿಲ್ಲೆಯ ಶಿರಸಿ ನಗರದ ಯಲ್ಲಾಪುರ ನಾಕಾದಲ್ಲಿ ನಡೆದಿತ್ತು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಹಾನಗಲ್ ಮೂಲದ ಪರಶುರಾಮ ಬಸಪ್ಪ ಸಣ್ಮನಿ (30) ಬಂಧಿತ ಆರೋಪಿ. ಇತನಿಂದ 37ಗ್ರಾಂ ಬಂಗಾರದ ಸರ ಹಾಗೂ ಒಂದು ಬೈಕ್‌ನ್ನು ವಶಕ್ಕೆ ಪಡೆಯಲಾಗಿದೆ.

# ಪ್ರತಿನಿತ್ಯ ಶ್ರೀಕೃಷ್ಣನ ಆರಾಧಿಸಿ: ರಘುಮೂರ್ತಿ





» **ಚಳ್ಳಕೆರೆ**

ಪ್ರಸ್ತುತ ವರ್ಷದ ಮುಂಗಾರು ಮಳೆ ವಿಫಲವಾಗಿದ್ದು, ಜನರು ಮಳೆ, ಬೆಳೆ ಇಲ್ಲದೆ ನೋವಿನಲಿದ್ದರೂ ಅವರಿಗೆ ಬದುಕಿನಲ್ಲಿ ಶಾಂತಿ, ನೆಮ್ಮದಿಯನ್ನು ನೀಡುವಂತೆ ಭಗವಾನ್ ಶ್ರೀಕೃಷ್ಣನಲ್ಲಿ ಪ್ರಾರ್ಥಿಸಿರುವುದಾಗಿ ಶಾಸಕ ಟಿ.ರಘುಮೂರ್ತಿ ತಿಳಿಸಿದರು. ಅವರು, ಭಾನುವಾರ ಕಾಟಪ್ಪನಹಟ್ಟಿಯ ಎತ್ತಪ್ಪ-ಜುಂಜಪ್ಪ ದೇವಸ್ಥಾನದ ಆವರಣದಲ್ಲಿ ಯಾದವ ಸಮುದಾಯ ಹಮ್ಮಿಕೊಂಡಿದ್ದ ಶ್ರೀಕೃಷ್ಣ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರಲ್ಲದೆ, ಸಮುದಾಯ ಹಮ್ಮಿಕೊಂಡಿದ್ದ ಬೃಹತ್ ಮೆರವಣಿಗೆಗೆ ಚಾಲನೆ ನೀಡಿದರು. ಯಾದವ ಸಮುದಾಯ ಹಲವಾರು ಸಮಸ್ಯೆಗಳ ನಡುವೆಯೂ ಸಹ ತಮ್ಮ ಆರಾಧ್ಯ ದೈವ ಶ್ರೀಕೃಷ್ಣನನ್ನು ಪ್ರತಿನಿತ್ಯ ಪೂಜಿಸುತ್ತಾ ಬಂದಿದೆ. ಭಗವಾನ್ ಶ್ರೀಕೃಷ್ಣ ಎಲ್ಲಾ ಸಮುದಾಯದ ದೇವರಾಗಿದ್ದಾನೆ. ಕೃಷ್ಣನನ್ನು ನೆನೆದರೆ ಸಂಕಷ್ಟಗಳು ಪರಿಹಾರವಾಗುತ್ತವೆ ಎಂಬುವುದು ಸುಳ್ಳಲ್ಲ. ಇಂದು ಈ ಕಾರ್ಯಕ್ರಮವನ್ನು ಆಯೋಜಿಸುವ ಮೂಲಕ ಮತ್ತೊಮ್ಮೆ ಶ್ರೀಕೃಷ್ಣನನ್ನು ನೆನಪಿಸುವ ಕಾರ್ಯವನ್ನು ಸಮುದಾಯದ ಮುಖಂಡರು ಮಾಡಿದ್ದು, ಎಲ್ಲರನ್ನೂ ಅಭಿನಂದಿಸುವೆ ಎಂದರು. ಶ್ರೀಕೃಷ್ಣನ ಜಯಂತಿ ಬೃಹತ್ ಮೆರವಣಿಗೆ ಕಾಟಪ್ಪನಹಟ್ಟಿಯಿಂದ ಹೊರಟು, ಪಾವಗಡ ರಸ್ತೆ, ನೆಹರೂ ವೃತ್ತ, ಅಂಬೇಡ್ಕರ್ ವೃತ್ತ, ಬಳ್ಳಾರಿ ರಸ್ತೆಯ ಮೂಲಕ ಕಾಟಪ್ಪನಹಟ್ಟಿಗೆ ಶ್ರೀಕೃಷ್ಣ ಭಾವಚಿತ್ರದೊಂದಿಗೆ ಮೆರವಣಿಗೆ ಸಾಗಿತು. ದಾರಿಯುದ್ದಕ್ಕೂ ಡಿಜೆಗೆ ಯುವಕರು ಕುಣಿದು ಕುಪ್ಪಳಿಸಿದರು. ಈ ಸಂದರ್ಭದಲ್ಲಿ ಯಾದವ ಸಮುದಾಯದ ತಾಲ್ಲೂಕು ಅಧ್ಯಕ್ಷ ಟಿ.ರವಿಕುಮಾರ್, ಹಿರಿಯ ಮುಖಂಡ ಬಿ.ವಿ.ಸಿರಿಯಣ್ಣ, ಕಾಡುಗೊಲ್ಲರ ಸಂಘದ ಅಧ್ಯಕ್ಷ ಬೂದಿಹಳ್ಳಿ ರಾಜು, ಗುತ್ತಿಗೆದಾರ ಬಂಜಿಗೆರೆ ಹನುಮಂತಪ್ಪ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ಈರಣ್ಣ, ಮಂಜುನಾಥ, ಹುಲಿಕುಂಟೆ ವೈ. ಕಾಂತರಾಜು, ಎಚ್.ಮಹಲಿಂಗಪ್ಪ, ರಂಗಸ್ವಾಮಿ, ವೀರೇಶ್, ದಾಸಯ್ಯರ ರಂಗಸ್ವಾಮಿ, ಕೆಂಪಮಂಜು, ಅಜ್ಜಣ್ಣ, ವೀರಭದ್ರಪ್ಪ, ಶ್ರೀಕಾಂತ್ ಮುಂತಾದವರು ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

# ವಿವಿಧ ಗ್ರಾಮಗಳಿಗೆ ಜಿಪಂ ಸಿಇಒ ಸೋಮಶೇಖರ್ ದಿಢೀರ್ ಭೇಟಿ

## ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸುಸ್ಥಿತಿಯಲ್ಲಿರಿಸಿಕೊಳ್ಳಲು ತಾಕೀತು

» **ಚಿತ್ರದುರ್ಗ**

ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸುಸ್ಥಿತಿಯಲ್ಲಿರಿಸಿಕೊಳ್ಳುವಂತೆಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ್ ಅವರು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ಸಾಣಿಕೆರೆ, ಬೆಳಗೆರೆ ಮತ್ತು ಹಿರಿಯೂರು ತಾಲ್ಲೂಕು ಬುರುಜಿನ ರೊಪ್ಪ ಸೇರಿದಂತೆ ವಿವಿಧ ಗ್ರಾಮ ಪಂಚಾಯತಿ ವ್ಯಾಪ್ತಿಗಳ ಗ್ರಾಮಗಳು, ಗ್ರಾ.ಪಂ. ಕಚೇರಿಗಳು, ಶಾಲೆಗಳಿಗೆ ಶನಿವಾರದಂದು ದಿಢೀರ್ ಭೇಟಿ ನೀಡಿದ ಅವರು, ಗ್ರಾಮೀಣ ಪ್ರದೇಶಗಳಲ್ಲಿನ ಕುಡಿಯುವ ನೀರಿನ ಮೇಲ್ಮಟ್ಟದ ಹಾಗೂ ಕೆಳಮಟ್ಟದ ಎಲ್ಲ ನೀರು ಸಂಗ್ರಹಗಾರಗಳನ್ನು ಸ್ವಚ್ಛಗೊಳಿಸಿ, ಅದನ್ನು ದಾಖಲೀಕರಣ ಮಾಡಿಟ್ಟುಕೊಳ್ಳಬೇಕು, ಗ್ರಾಮಗಳಲ್ಲಿನ ಚರಂಡಿಗಳನ್ನು ಕಾಲಕಾಲಕ್ಕೆ ಸ್ವಚ್ಛಗೊಳಿಸಬೇಕು, ಎಲ್ಲ ಶುದ್ಧ ಕುಡಿಯುವ ನೀರಿನ ಘಟಕಗಳನ್ನು (ಆರ್.ಓ ಪ್ಲಾಂಟ್‌ಗಳು) ಸುಸ್ಥಿತಿಯಲ್ಲಿರಿಸಿಕೊಳ್ಳಬೇಕು, ಒಂದು ವೇಳೆ ಕೆಟ್ಟು ಹೋಗಿರುವ ಬಗ್ಗೆ ದೂರುಗಳು ಬಂದಲ್ಲಿ, ತಕ್ಷಣ ಸ್ಪಂದಿಸಿ, ದುರಸ್ತಿಗೊಳಿಸಬೇಕು, ಎಫ್.ಟಿ.ಕೆ. (ಫೀಲ್ಡ್ ಟೆಸ್ಟ್ ಕಿಟ್) ಬಳಸಿ, ಕುಡಿಯುವ ನೀರಿನ ಗುಣಮಟ್ಟವನ್ನು ಕಾಲಕಾಲಕ್ಕೆ ಪರೀಕ್ಷೆಗೆ ಒಳಪಡಿಸಬೇಕು, ಶೀಘ್ರದಲ್ಲಿಯೇ ಹೊಸ ಎಫ್.ಟಿ.ಕೆ. ಕಿಟ್‌ಗಳನ್ನು ಪೂರೈಸಲಾಗುವುದು, ಗ್ರಾಮ ಪಂಚಾಯತ್‌ಗಳಿಗೆ ಸಕಾಲ ದಡಿ ವಿವಿಧ ಸೇವೆಗಳಿಗಾಗಿ ಸಲ್ಲಿಕೆಯಾಗುವ ಅರ್ಜಿಗಳನ್ನು



ನಿಗದಿತ ಕಾಲಮಿತಿಯೊಳಗೆ ವಿಲೇವಾರಿ ಮಾಡುವಂತೆ ಜಿ.ಪಂ. ಸಿಇಒ ಅವರು ಸೂಚನೆ ನೀಡಿದರು. ಗ್ರಾಮ ಪಂಚಾಯತ್‌ಗಳು ತಮ್ಮ ವ್ಯಾಪ್ತಿಯ ವಿವಿಧ ಖರ್ಚು ವೆಚ್ಚಗಳಿಗೆ ಸಂಬಂಧಿಸಿದ ಆಯ-ವ್ಯಯವನ್ನು ಸಿದ್ಧಮಾಡಿಕೊಳ್ಳಬೇಕು, ಉದ್ಯೋಗಖಾತ್ರಿಯೋಜನೆಯಡಿ ಬೇಡಿಕೆ ಬರುವ ಕೆಲಸಗಳಿಗೆ ಸಂಬಂಧಿಸಿದಂತೆ, ಕಾಮಗಾರಿಗಳನ್ನು ಕೈಗೆತ್ತಿಕೊಂಡು, ಉದ್ಯೋಗ ನೀಡಬೇಕು, ಹಾಗೂ ಹೆಚ್ಚು, ಹೆಚ್ಚು ಮಾನವ ದಿನಗಳನ್ನು ಸೃಜಿಸಬೇಕು, ಕೆಲಸ ಪೂರ್ಣಗೊಳಿಸಿದ ಕೂಲಿ ಕಾರ್ಮಿಕರಿಗೆ ನಿಗದಿತ ಕಾಲಮಿತಿಯಲ್ಲಿ ಕೂಲಿ ಹಣ ಪಾವತಿ ಮಾಡಬೇಕು. ಹದಿನೈದನೇ ಹಣಕಾಸು ಯೋಜನೆಯಡಿ ಕ್ರಿಯಾ ಯೋಜನೆಯನ್ನು ತಂತ್ರಾಂಶದಲ್ಲಿ ಅಳವಡಿಸಬೇಕು. ಗ್ರಾಮಗಳಲ್ಲಿ ವೈಯಕ್ತಿಕ ಶೌಚಾಲಯಕ್ಕಾಗಿ ಸಲ್ಲಿಕೆಯಾಗಿರುವ ಅರ್ಜಿಗಳನ್ನು ಪರಿಶೀಲಿಸಿ, ಅರ್ಹ ಫಲಾನುಭವಿಗಳಿಗೆ ತಕ್ಷಣವೇ ಕಾರ್ಯಾದೇಶ ವಿತರಿಸಬೇಕು. ಸರ್ಕಾರಿ ಶಾಲೆಗಳಲ್ಲಿರುವ ಮತಗಟ್ಟೆಗಳನ್ನು ಪರಿಶೀಲಿಸಿ, ಕನಿಷ್ಠ ಮೂಲಭೂತ ಸೌಕರ್ಯಗಳು ಇರುವುದನ್ನು ಖಚಿತಪಡಿಸಿಕೊಳ್ಳಬೇಕು, ಗ್ರಾಮ ಸಭೆಗಳಲ್ಲಿ ಹರ್ ಘರ್ ಜಲ್ ಘೋಷಣೆ ಮಾಡಬೇಕು, ಗ್ರಾಮ ಪಂಚಾಯತ್ ಗಳು ಪಿಓಎಸ್ ಯಂತ್ರಗಳನ್ನು ಬಳಸಿ, ತೆರಿಗೆಯನ್ನು ಸಂಗ್ರಹಿಸುವ ಕಾರ್ಯವನ್ನು ಸಮರ್ಪಕವಾಗಿ ಕೈಗೊಳ್ಳಬೇಕು, ಈ ಬಗ್ಗೆ ಯಾವುದೇ ದೂರುಗಳಿಗೆ ಅವಕಾಶ ಕಲ್ಪಿಸಬಾರದು ಎಂದು ಜಿ.ಪಂ. ಸಿಇಒ ಸೋಮಶೇಖರ್ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿ.ಪಂ. ಉಪಕಾರ್ಯದರ್ಶಿ ತಿಮ್ಮಪ್ಪ, ಮುಖ್ಯ ಯೋಜನಾಧಿಕಾರಿ ಸತೀಶ್ ರೆಡ್ಡಿ ಸೇರಿದಂತೆ ವಿವಿಧ ಅಧಿಕಾರಿಗಳು, ಆಯಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಇದ್ದರು.

# ಸದ್ಯದಲ್ಲಿಯೇ ಸದಾಶಿವ ಆಯೋಗ ವರದಿ ಜಾರಿ: ಸಚಿವ ಮುನಿಯಪ್ಪ

» **ಮೊದಲ ಪುಟದಿಂದ**

ಆದರೆ, ಪಕ್ಷದ ಕೆಲ ಶಾಸಕರು ಅಸಮಧಾನಿತರಾಗಿ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ, ಬಿಜೆಪಿ ಸೇರಿದ್ದರಿಂದ ಬಿಜೆಪಿ ಪಕ್ಷ ಅಧಿಕಾರಕ್ಕೆ ಬಂದಿತು. ಕಳೆದ ಬಾರಿ ನಮ್ಮ ಸರ್ಕಾರದ ಅವಧಿಯಲ್ಲಿ 15 ಲಕ್ಷ ಮನೆಗಳನ್ನು ನಿರ್ಮಾಣ ಮಾಡಿದ್ದೇವೆ. ಆದರೆ, ಬಿಜೆಪಿ ಸರ್ಕಾರದಲ್ಲಿ ಒಂದೇ ಒಂದು ಮನೆಯನ್ನು ನಿರ್ಮಾಣ ಮಾಡಲಾಗಲಿಲ್ಲ. ಈ ವರ್ಷ ರಾಜ್ಯದ ಹಲವೆಡೆ ಬರದ ಛಾಯೆ ಕಾಣಿಸಿಕೊಂಡಿದ್ದು, ಶೀಘ್ರವೇ ಕೇಂದ್ರದ ತಂಡವನ್ನು ಬರ ಅಧ್ಯಯನ ನಡೆಸಲಿದೆ. ನಂತರ ಅಧ್ಯಯನದ ವರದಿಯ ಆಧಾರದ ಮೇಲೆ ಬರಪೀಡಿತ ತಾಲೂಕುಗಳನ್ನು ಘೋಷಣೆ ಮಾಡಲಾಗುವುದು ಎಂದರು. ಹೊಸದುರ್ಗ ಪಟ್ಟಣದಲ್ಲಿ ಶಿಥಿಲಾವಸ್ಥೆಯಲ್ಲಿರುವ ಸಮುದಾಯ ಭವನದ ಸ್ಥಳದಲ್ಲಿಯೇ, ಬೃಹತ್ ಸಮುದಾಯ ಭವನ ಮತ್ತು ಕಲ್ಯಾಣ ಮಂಟಪ ನಿರ್ಮಾಣಕ್ಕೆ ಸಹಕರಿಸಲು ಕೋರಿದ್ದು, ಸಮುದಾಯದವರ ಆಶಯದಂತೆ ಶಾಸಕ ಗೋವಿಂದಪ್ಪನವರ ಜೊತೆಗೂಡಿ ಬೃಹತ್ ಸಮುದಾಯ ಭವನ ಹಾಗೂ ಅಂಬೇಡ್ಕರ್ ಪ್ರತಿಮೆ ನಿರ್ಮಾಣಕ್ಕೆ ಸಹಕರಿಸುವೆ ಎಂದು ಹೇಳಿದರು. ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ಮಾತನಾಡಿ, ನಾವು ಮಾಡುವ ಕಾರ್ಯಕ್ರಮಗಳು ಸಮುದಾಯದ ಪ್ರಗತಿಗೆ ದಿಕ್ಸೂಚಿಯಾಗಬೇಕು. ಸರ್ಕಾರದ ಸೌಲಭ್ಯಗಳನ್ನು ಸರಿಯಾಗಿ ಸದುಪಯೋಗ ಪಡಿಸಿಕೊಳ್ಳಬೇಕು. ಕೆಲವು ಸರ್ಕಾರದ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ತಲುಪದೇ ಇರುವುದರಿಂದ ದಲಿತರು ದಲಿತರಾಗಿಯೇ ಉಳಿದಿದ್ದಾರೆ. ನಮ್ಮ ಕಾಂಗ್ರೆಸ್ ಸರ್ಕಾರ ಬಡವರು, ದಲಿತರು, ಶೋಷಿತರು ಮತ್ತು ಇತರ ಎಲ್ಲಾ ವರ್ಗಗಳ ಜನರ ಪ್ರಗತಿಗಾಗಿ ಕೆಲಸ ಮಾಡುತ್ತಿದೆ. ಚುನಾವಣಾ ಪೂರ್ವದಲ್ಲಿ ಕೊಟ್ಟಂತಹ 5 ಗ್ಯಾರಂಟಿ ಮತ್ತು ಭರವಸೆಗಳನ್ನು ಒಂದೊಂದಾಗಿ ಈಡೇರಿಸುತ್ತಿದ್ದೇವೆ ಎಂದು ಹೇಳಿದರು.ಕಾರ್ಯಕ್ರಮದ ಮುಖ್ಯ ಭಾಗವಾಗಿ ಸಚಿವರಾದ ಕೆ. ಏಚ್.ಮುನಿಯಪ್ಪ, ಆರ್.ಬಿ.ತಿಮ್ಮಾಪುರ, ಶಾಸಕರಾದ ಬಿ.ಜಿ. ಗೋವಿಂದಪ್ಪ, ಬಸವಂತಪ್ಪ, ಕೆಪಿಸಿಸಿ ಕಾರ್ಯಾಧ್ಯಕ್ಷ ಬಿ.ಎನ್.ಚಂದ್ರಪ್ಪ, ಉಪಾಧ್ಯಕ್ಷ ಹೆಚ್.ಆಂಜನೇಯ, ಸಮುದಾಯದ ಮುಖಂಡರಾದ ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿ, ಮಂಜುನಾಥ್ ಮತ್ತು ಇತರರನ್ನು ಸನ್ಮಾನಿಸಿ, ಅಭಿನಂದಿಸಿ, ಗೌರವಿಸಲಾಯಿತು. ಈ ವೇಳೆ ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಾಕೀಕೆರೆ ತಿಪ್ಪೇಸ್ವಾಮಿ ವಹಿಸಿದ್ದರು. ಮಾದಿಗ ಸಮುದಾಯದ ಮುಖಂಡರಾದ ರಾಜಪ್ಪ, ಲಕ್ಕಿಹಳ್ಳಿ ಮುದ್ದಪ್ಪ, ಮೂರ್ತಪ್ಪ, ಕೈನೋಡು ಚಂದ್ರಪ್ಪ ಬೀಸನಹಳ್ಳಿ ಜಯಪ್ಪ ಮತ್ತು ರವಿಕುಮಾರ್ ಸೇರಿದಂತೆ ಸಮುದಾಯದ ನೂರಾರು ಜನರು ಪಾಲ್ಗೊಂಡಿದ್ದರು.

## ತಾಲ್ಲೂಕು ಮಟ್ಟದಿಂದ ಜಿಲ್ಲಾ ಹಂತಕ್ಕೆ ಆಯ್ಕೆ



» **ಚಿತ್ರದುರ್ಗ**

ನಗರದ ಸರ್ಕಾರಿ ಬಾಲಕರ ಪ್ರೌಢಶಾಲೆಯಲ್ಲಿ ನಡೆದ ತಾಲ್ಲೂಕು ಮಟ್ಟದ ವಸ್ತು ಪ್ರದರ್ಶನ ಸ್ಪರ್ಧೆಯಲ್ಲಿ ಶ್ರೀ ಪಾರ್ಶ್ವನಾಥ ವಿದ್ಯಾ ಸಂಸ್ಥೆಯ 10ನೇ ತರಗತಿ ವಿದ್ಯಾರ್ಥಿಗಳಾದ ಸಾನಿಯಾ ಮತ್ತು ರಿಯಾ ಜೈನ್ , ವಿಭಾಗ 2ರಲ್ಲಿ, ಸಿವಿಲ್ ಇಂಜಿನಿಯರಿಂಗ್ ವಿಭಾಗದಲ್ಲಿ ಮಾದರಿಯನ್ನು ತಯಾರಿಸಿ ತಾಲ್ಲೂಕು ಮಟ್ಟದಲ್ಲಿ ವಿಜೇತರಾಗಿ ಜಿಲ್ಲಾ ಹಂತಕ್ಕೆ ಆಯ್ಕೆಯಾಗಿದ್ದಾರೆ.

ಈ ವಿದ್ಯಾರ್ಥಿಗಳಿಗೆ ಶಾಲೆಯ ಅಧ್ಯಕ್ಷರು ಬಾಬುಲಾಲ್ ಜೀ ಪಟಿಯಾತ್, ಉಪಾಧ್ಯಕ್ಷರಾದ ಉತ್ತಮ್ ಚಂದ್‌ಸುರಾನಾ, ಕಾರ್ಯದರ್ಶಿಯಾದ ಸುರೇಶ್ ಕುಮಾರ್ ಸಿಸೋಡಿಯಾ, ಶಾಲಾ ಆಡಳಿತ ಮಂಡಳಿಯ ಎಲ್ಲಾ ಸದಸ್ಯರು ಹಾಗೂ ಸಲಹಾ ಸಮಿತಿ ಸದಸ್ಯರು, ಮುಖ್ಯೋಪಾಧ್ಯಾಯರು ಹಾಗೂ ಶಿಕ್ಷಕರು ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ಯಶಸ್ವಿಗಳಾಗಲೆಂದು ಹಾರೈಸಿದ್ದಾರೆ.

## ಪ್ರಮುಖ ಸುದ್ದಿ

### ಪ್ರತಿನಿತ್ಯ ವಿದ್ಯಾಭ್ಯಾಸಕ್ಕಾಗಿ ಚಿತ್ರದುರ್ಗಕ್ಕೆ ತೆರಳಲು ಪರದಾಡುವ ವಿದ್ಯಾರ್ಥಿಗಳು

# ಬಸ್ ಸೌಲಭ್ಯ ಕಲ್ಪಿಸುವಂತೆ ಶಾಸಕರಲ್ಲಿ ವಿನಂತಿ

» **ಚಳ್ಳಕೆರೆ**

ಪರಶುರಾಮಪುರ ಮತ್ತು ಸುತ್ತಮುತ್ತಲ ಗ್ರಾಮಗಳ ನೂರಾರು ವಿದ್ಯಾರ್ಥಿಗಳು ಡಿಪ್ಲೋಮ, ನರ್ಸಿಂಗ್, ಪದವಿ, ಐಟಿಐ ಮುಂತಾದ ವಿಷಯಗಳ ಅಭ್ಯಾಸಕ್ಕಾಗಿ ಚಿತ್ರದುರ್ಗಕ್ಕೆತೆರಳಬೇಕಿದ್ದು ಕೆಎಸ್‌ಆರ್‌ಟಿಸಿ ಬಸ್‌ಗಳಿಲ್ಲದೆ ಪ್ರತಿನಿತ್ಯ ವಿದ್ಯಾರ್ಥಿಗಳು ಮನನೊಂದು ಪರದಾಡುತ್ತಾ ಚಿತ್ರದುರ್ಗಕ್ಕೆ ತೆರಳುವ ಪರಿಸ್ಥಿತಿ ಇದೆ.

ಕಳೆದ ಕೆಲವು ತಿಂಗಳುಗಳಿಂದ ಬಸ್‌ಗಾಗಿ ಪರದಾಡಿದ ವಿದ್ಯಾರ್ಥಿಗಳು ಕ್ಷೇತ್ರದ ಶಾಸಕ ಟಿ.ರಘುಮೂರ್ತಿಗೆ ಮನವಿ ಮಾಡಿರುವ ವಿದ್ಯಾರ್ಥಿಗಳು, ನಮ್ಮ ವಿದ್ಯಾಭ್ಯಾಸಕ್ಕಾಗಿ ಪ್ರತಿನಿತ್ಯ ಪರಶುರಾಮಪುರದಿಂದ ಚಿತ್ರದುರ್ಗಕ್ಕೆ ಬಸ್ ವ್ಯವಸ್ಥೆ ಮಾಡುವಂತೆ ವಿನಂತಿಸಿದ್ದಾರೆ. ಕೆಎಸ್‌ಆರ್‌ಟಿಸಿ ಡಿಪೋ ವ್ಯವಸ್ಥಾಪಕರಿಗೆ ಎರಡ್ಮೂರು ಬಾರಿ ಮನವಿ ಮಾಡಿರುವ ವಿದ್ಯಾರ್ಥಿಗಳು ಕೊನೆಯ ಪ್ರಯತ್ನವಾಗಿ ಪೊಲೀಸ್ ಠಾಣೆಗೆ ಆಗಮಿಸಿ ಪೊಲೀಸ್ ಅಧಿಕಾರಿಗಳಿಗೆ ಬಸ್ ವ್ಯವಸ್ಥೆಯ ಬಗ್ಗೆ ವಾಸ್ತವ ಸ್ಥಿತಿಯನ್ನು




ತಿಳಿಸಿದ್ದಾರೆ. ಆದರೆ, ಠಾಣೆಯಲ್ಲಿದ್ದ ಇನ್ಸ್‌ಪೆಕ್ಟರ್ ಮತ್ತು ಪಿಎಸ್‌ಐ ನಾವು ಸಹ ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಮಾಡುವ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಪತ್ರಿಕೆಯೊಂದಿಗೆ ಮಾತನಾಡಿದ ಅಭಿಲಾಷ್, ಚಂದು, ರಕ್ಷಿತ, ರಂಜಿತ, ದೀಪು, ಅಮೃತ, ಚಂದ್ರಕಲಾ, ಅಂಜಲಿ, ನಿರ್ಮಲ, ತ್ರಿವೇಣಿ, ಗೌರಮ್ಮ, ರಮ್ಯ, ನೇತ್ರಾ, ದಿಲೀಪ್, ದಿನೇಶ್ ಮುಂತಾದವರು ಹ್ಯಾಟ್ರಿಕ್ ವಿಜಯ ಸಾಧಿಸಿರುವ ನಮ್ಮ ಶಾಸಕರ ಸಾಧನೆಗಳ ಬಗ್ಗೆ ನಮಗೆ ಹೆಮ್ಮೆ ಇದೆ. ಆದರೆ, ಪ್ರತಿನಿತ್ಯ ನಾವು ಪರದಾಡಿ ಓಡಾಟ ನಡೆಸಿ ವಿದ್ಯಾಭ್ಯಾಸ ನಡೆಸುವುದು ಕಷ್ಟವಾಗಿದೆ. ಬಸ್ ವ್ಯವಸ್ಥೆಯನ್ನು ಶಾಸಕರು ಮಾಡಿಕೊಟ್ಟಲ್ಲಿ ಮಾತ್ರ ನಮ್ಮ ವಿದ್ಯಾಭ್ಯಾಸ ಮುಂದುವರೆಸಲು ನಮಗೆ ಸಹಾಯವಾಗಲಿದೆ. ದಯಮಾಡಿ ಶಾಸಕರು ನಮ್ಮ ಮನವಿಗೆ ಸಕರಾತ್ಮಕವಾಗಿ ಸ್ಪಂದಿಸಬೇಕೆಂಬ ವಿಶೇಷ ಮನವಿಯನ್ನು ಪತ್ರಿಕೆ ಮೂಲಕ ಮಾಡುತ್ತಿದ್ದೇವೆ ಎಂದು ತಿಳಿಸಿದ್ದಾರೆ.

> ಪರಶುರಾಮಪುರ ಹೋಬಳಿಯ ಗೌರಿಪುರ, ಕ್ಯಾದಿಕುಂಟೆ, ಜುಂಜಗುಂಟೆ, ಚೌಳೂರು ಸೇರಿದಂತೆ ಹಲವಾರು ಗ್ರಾಮಗಳಿಂದ ಸುಮಾರು 50ಕ್ಕೂ ಹೆಚ್ಚು ವಿದ್ಯಾರ್ಥಿಗಳು ವಿದ್ಯಾಭ್ಯಾಸಕ್ಕಾಗಿ ಚಿತ್ರದುರ್ಗಕ್ಕೆ ತೆರಳಬೇಕಿದೆ. ಬೆಳಗ್ಗೆ ಸುಮಾರು 7.30ಗೆ ಬಸ್ ವ್ಯವಸ್ಥೆ ಅಗತ್ಯವಿದೆ. ಕೂಡಲೇ ಶಾಸಕರು ಬಸ್ ವ್ಯವಸ್ಥೆ ಮಾಡಬೇಕೆಂದು ಮನವಿ.
>
> » **ಭರತ್, ಅಜ್ಮತ್, ಅಂಗರಾಜು, ನವೀನ್ ವಿದ್ಯಾರ್ಥಿಗಳು.**

## ಫಾಸ್ಟ್ ನ್ಯೂಸ್

### ಬಾಲೇನಹಳ್ಳಿ ಶ್ರೀಆಂಜನೇಯಸ್ವಾಮಿಗೆ ಹತ್ತಿಯಿಂದ ವಿಶೇಷ ಅಲಂಕಾರ



ಚಳ್ಳಕೆರೆ: ತಾಲ್ಲೂಕಿನ ಬಾಲೇನಹಳ್ಳಿ ಗ್ರಾಮದಲ್ಲಿರುವ ಶ್ರೀಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಕಡೆಯ ಶ್ರಾವಣ ಮಾಸದ ಶನಿವಾರ ಹಿನ್ನೆಲೆಯಲ್ಲಿ ಶ್ರೀಆಂಜನೇಯಸ್ವಾಮಿಗೆ ವಿಶೇಷ ಅಲಂಕಾರ ಮತ್ತು ಪೂಜಾ ಕಾರ್ಯಕ್ರಮಗಳನ್ನು ನೂರಾರು ಭಕ್ತರ ಸಮ್ಮುಖದಲ್ಲಿ ನಡೆಸಲಾಯಿತು.

ಆರ್ಚಕ ಸುಬ್ರಮಣ್ಯಶರ್ಮ ಮಾಹಿತಿ ನೀಡಿ, ಶ್ರಾವಣ ಮಾಸದ ಕಡೆ ಶನಿವಾರ ಹಿನ್ನೆಲೆಯಲ್ಲಿ ಭಕ್ತರ ಅನಿಸಿಕೆಯಂತೆ ಶ್ರೀಆಂಜನೇಯಸ್ವಾಮಿಗೆ ವಿಶೇಷ ಅಲಂಕಾರವನ್ನು ಶುಭ್ರವಾದ ಹತ್ತಿಯಿಂದ ಮಾಡಲಾಗಿದೆ. ಬೆಳಗೆ ಅಭಿಷೇಕ ನಡೆಸಿ ನಂತರ ಶ್ರೀಸ್ವಾಮಿಗೆ ಅಲಂಕಾರವನ್ನು ಪೂರೈಸಲಾಯಿತು. ಗ್ರಾಮದ ನೂರಾರು ಭಕ್ತರು ಆಗಮಿಸಿ ಶ್ರೀಸ್ವಾಮಿಯ ದರ್ಶನ, ಆಶೀರ್ವಾದ ಪಡೆದರು. ಬಂದ ಭಕ್ತಾಧಿಗಳಿಗೆ ತೀರ್ಥ, ಪ್ರಸಾದ ವಿನಿಯೋಜಿಸಲಾಯಿತು. ಪುರೋಹಿತ ನಾಗೇಶ್ ಭಾರದ್ವಾಜ್ ಸಹ ಪೂಜಾ ಕಾರ್ಯಕ್ಕೆ ಸಹಕರಿಸಿದರು.

### ಕಿಡಿಗೇಡಿಗಳ ಕೃತ್ಯ : ಮಾಧ್ಯಮ ಮಹಾಒಕ್ಕೂಟದ ಕಾರ್ಯಕ್ರಮದ ಬ್ಯಾನರ್ ಹರಿದು ಪರಾರಿ




» ಚಳ್ಳಕೆರೆ

ಕರ್ನಾಟಕ ಮಾಧ್ಯಮ ಮಹಾಒಕ್ಕೂಟ ಇಲ್ಲಿನ ರೋಟರಿ ಬಾಲಭವನದಲ್ಲಿ ಸೆ. 10ರ ಭಾನುವಾರ ಗಡಿನಾಡು ಪತ್ರಕರ್ತರ ಕಾರ್ಯಗಾರ ಶಿಬಿರವನ್ನು ಹಮ್ಮಿಕೊಂಡಿದ್ದು, ಈ ಬಗ್ಗೆ ಪ್ರಚಾರ ಪಡಿಸಲು ನೆಹರೂ ಮತ್ತು ಅಂಬೇಡ್ಕರ್ ವೃತ್ತದಲ್ಲಿ ಬ್ಯಾನರ್‌ಗಳನ್ನು ಹಾಕಲಾಗಿತ್ತು. ಕಾರ್ಯಕ್ರಮವನ್ನು ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಸಂಘಟಕರು ನಗರದ ಪ್ರಮುಖ ರಸ್ತೆ ಹಾಗೂ ವೃತ್ತದಲ್ಲಿ ಬ್ಯಾನರ್‌ಗಳ ಮೂಲಕ ಜನರ ಗಮನ ಸೆಳೆಯಲು ಮುಂದಾಗಿದ್ದರು. ಕಾರ್ಯಕ್ರಮಕ್ಕೆ ಸಂಬಂಧಪಟ್ಟ ವ್ಯವಸ್ಥಾಪಕರು ಪೂರ್ವಸಿದ್ದತೆ ನಡೆಸಿಕೊಳ್ಳುತ್ತಿರುವ ಸಂದರ್ಭದಲ್ಲಿ ಶುಕ್ರವಾರ ರಾತ್ರಿ ಯಾರೋ ಕಿಡಿಗೇಡಿಗಳು ಅಂಬೇಡ್ಕರ್ ಮತ್ತು ನೆಹರೂ ವೃತ್ತದಲ್ಲಿ ಅಳವಡಿಸಿದ್ದ ಬ್ಯಾನರ್‌ಗಳನ್ನು ಹರಿದು ಹಾಕಿದ್ದಾರೆ. ಶನಿವಾರ ಬೆಳಗ್ಗೆ ಬ್ಯಾನರ್‌ಗಳು ನಿರ್ಮಿಸಿದ ಜಾಗದಲ್ಲಿ ಕೇವಲ ಬೊಂಬುಗಳು ಮಾತ್ರ ಗೋಚರಿಸುತ್ತಿದ್ದು ಬ್ಯಾನರ್‌ಗಳು ಮಾಯವಾಗಿದ್ದವು. ಕಿಡಿಗೇಡಿಗಳ ಕೃತ್ಯದ ಬಗ್ಗೆ ಕಾರ್ಯಕ್ರಮದ ವ್ಯವಸ್ಥಾಪಕರು ಪೊಲೀಸ್ ಇಲಾಖೆಗೆ ದೂರು ನೀಡಿದ್ದಾರೆ ಎನ್ನಲಾಗಿದೆ.

### ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ

» ದಾವಣಗೆರೆ

ಸೆಪ್ಟೆಂಬರ್ 11ರಂದು ಬೆಳಿಗ್ಗೆ 9.30ಕ್ಕೆ ಜಿಲ್ಲಾ ಕಾರಾಗೃಹ ಇಲಾಖೆಯ ಸಭಾಂಗಣದಲ್ಲಿ "ಕ್ರಿಯೆಯ ಮೂಲಕ ಭರವಸೆಯನ್ನು ಮೂಡಿಸೋಣ"( CREATE HOPE THROUGH ACTION ಎಂಬ ಘೋಷಣೆಯೊಂದಿಗೆ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆಯನ್ನು ಏರ್ಪಡಿಸಲಾಗಿದೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ, ಜಿಲ್ಲಾ ಕಾರಾಗೃಹ ಇಲಾಖೆ, ಚಿಗಟೇರಿ ಜಿಲ್ಲಾ ಆಸ್ಪತ್ರೆ ಮನೋವೈದ್ಯಕೀಯ ವಿಭಾಗ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ದಾವಣಗೆರೆ, ಹಾಗೂ ಭಾರತೀಯ ಕಲಾ ಸಾಂಸ್ಕೃತಿಕ ಅಕಾಡೆಮಿ (ಅ) ದಾವಣಗೆರೆ. (ಮಾನಸಧಾರ ಸಮುದಾಯ ಮಾನಸಿಕ ಆರೋಗ್ಯ ಕೇಂದ್ರ) ಇವರ ಸಹಯೋಗದಲ್ಲಿ ಕಾರ್ಯಕ್ರಮ ಏರ್ಪಡಿಸಲಾಗಿದ್ದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ರಾಜೇಶ್ವರಿ.ಎನ್ ಹೆಗಡೆ ಅವರು ಕಾರ್ಯಕ್ರಮ ಉದ್ಘಾಟಿಸುವರು.

## ರಾಹುಲ್ ಭಾರತ್ ಜೋಡೋ ಪಾದಯಾತ್ರೆ

# ಕಾಂಗ್ರೆಸ್ಸಿಂದ ವಾರ್ಷಿಕೋತ್ಸವ ಮೆರವಣಿಗೆ

» ಚಿತ್ರದುರ್ಗ




ಪಕ್ಷದಲ್ಲಿ ಯಾರು ಲೀಡರ್‌ಗಳಲ್ಲ. ಎಲ್ಲರೂ ಒಟ್ಟಾಗಿ ಸೇರಿ ಕೆಲಸ ಮಾಡಿದಾಗ ಮಾತ್ರ ಚುನಾವಣೆಯಲ್ಲಿ ಜಯಗಳಿಸಬಹುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ಎ.ಐ.ಸಿ.ಸಿ. ಯುವ ನೇತಾರ ರಾಹುಲ್‌ಗಾಂಧಿ ಕಳೆದ ವರ್ಷ ಸೆಪ್ಟಂಬರ್ 7 ರಂದು ಕಾಶ್ಮೀರದಿಂದ ಕನ್ಯಾಕುಮಾರಿವರೆಗೆ ನಡೆಸಿದ ಭಾರತ್ ಜೋಡೋ ಪಾದಯಾತ್ರೆಗೆ ಒಂದು ವರ್ಷವಾಗಿರುವುದರಿಂದ ಜಿಲ್ಲಾ ಕಾಂಗ್ರೆಸ್ ವತಿಯಿಂದ ಭಾನುವಾರ ನಗರದಲ್ಲಿ ನಡೆದ ಪ್ರಥಮ ವಾರ್ಷಿಕೋತ್ಸವ ಮೆರವಣಿಗೆಯನ್ನುದ್ದೇಶಿಸಿ ಮಾತನಾಡಿದರು.

ಐದು ವರ್ಷಗಳ ಕಾಲ ರಾಜ್ಯದಲ್ಲಿ ಅಧಿಕಾರ ನಡೆಸಿದ ಬಿಜೆಪಿ. ಭ್ರಷ್ಟಾಚಾರದಲ್ಲಿ ಮುಳುಗಿತ್ತು. ವಿಧಾನಸಭೆ ಚುನಾವಣೆಗೂ ಮುನ್ನ ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಇವರುಗಳು ಐದು ಉಚಿತ ಗ್ಯಾರೆಂಟಿಗಳನ್ನು ಘೋಷಿಸಿ ಅಧಿಕಾರಕ್ಕೆ ಬಂದ ಮೇಲೆ ನಾಲ್ಕು ಗ್ಯಾರೆಂಟಿಗಳನ್ನು ಈಡೇರಿಸಿ ನುಡಿದಂತೆ ನಡೆದಿದ್ದಾರೆ. ಭಾರತ್ ಜೋಡೋ ಯಾತ್ರೆ ಮೂಲಕ ಪಕ್ಷಕ್ಕೆ ಶಕ್ತಿ ತುಂಬಿರುವುದರಿಂದ ದೇಶ ಆಳುವ ಸಾಮರ್ಥ್ಯ ರಾಹುಲ್‌ಗಾಂಧಿಗೆ ಇದೆ ಎಂದು ಜನ ಅರ್ಥಮಾಡಿಕೊಂಡಿದ್ದಾರೆ. ಮುಂದಿನ ವರ್ಷ ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ ಹೆಚ್ಚಿನ ಸೀಟುಗಳನ್ನು ಗೆಲ್ಲಬೇಕಾಗಿರುವುದರಿಂದ ಪಕ್ಷದ ಕಾರ್ಯಕರ್ತರು ಈಗಿನಿಂದಲೆ ಸಂಘಟನೆಯಲ್ಲಿ ತೊಡಗಬೇಕು. ಜೆಡಿಎಸ್. ಸೋಲಿನ ಭಯದಿಂದ ಬಿಜೆಪಿ. ಜೊತೆ ಹೊಂದಾಣಿಕೆ ಮಾಡಿಕೊಳ್ಳಲು ಹರಸಾಹಸ ನಡೆಸುತ್ತಿದೆ ಎಂದು ಟೀಕಿಸಿದರು.

ಮಾಜಿ ಸಂಸದ ಬಿ.ಎನ್.ಚಂದ್ರಪ್ಪ ಮಾತನಾಡಿ ರಾಹುಲ್‌ಗಾಂಧಿ ಕೈಗೊಂಡ ಭಾರತ್‌ಜೋಡೋ ಯಾತ್ರೆಗೆ ಒಂದು ವರ್ಷ ಪೂರ್ಣವಾಗಿದೆ. ಕೇಂದ್ರದಲ್ಲಿ ಬಿಜೆಪಿ. ಅಧಿಕಾರಕ್ಕೆ ಬಂದಾಗಿನಿಂದಲೂ ಎಲ್ಲರ ಮನಸ್ಸುಗಳು ಒಡೆದು ಹೋಗಿದೆ. ಅದಕ್ಕಾಗಿ ಎಲ್ಲಾ ಜಾತಿ ಧರ್ಮದವರನ್ನು ಜೊತೆಗೆ ಕರೆದುಕೊಂಡು ಹೋಗುವ ಉದ್ದೇಶದಿಂದ ರಾಹುಲ್‌ಗಾಂಧಿ ಭಾರತ್ ಜೋಡೋಯಾತ್ರೆ ಆರಂಭಿಸಿದರು. ಕಾಶ್ಮೀರದಿಂದ ಕನ್ಯಾಕುಮಾರಿವರೆಗೆ ನಾಲ್ಕು ಸಾವಿರ ಕಿ.ಮೀ.ನಡೆದು ಕಾರ್ಯಕರ್ತರಲ್ಲಿ ಉತ್ಸಾಹ ತುಂಬಿದ ಫಲವಾಗಿ ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ 136 ಸ್ಥಾನಗಳನ್ನು ಗೆದ್ದುಕೊಂಡಿತು. ಪ್ರಧಾನಿ ಮೋದಿ ಕಾಲಿಟ್ಟ ಕಡೆಯಲ್ಲೆಲ್ಲಾ ಬಿಜೆಪಿ.ಸೋತಿದೆ. ರಾಹುಲ್ ಪಾದಸ್ಪರ್ಶ ಮಾಡಿದ ಜಾಗದಲ್ಲೆಲ್ಲಾ ಕಾಂಗ್ರೆಸ್ ಗೆದ್ದಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾಗಿದ್ದೆ ತಡ ಐದು ಗ್ಯಾರೆಂಟಿಗಳಲ್ಲಿ ನಾಲ್ಕನ್ನು ಜಾರಿಗೊಳಿಸಿದ್ದಾರೆ. ಒಂದು ಕೋಟಿ ಇಪ್ಪತ್ತು ಲಕ್ಷ ಮಹಿಳೆಯರಿಗೆ ಪ್ರತಿ ತಿಂಗಳು ಎರಡು ಸಾವಿರ ರೂ. ಬ್ಯಾಂಕ್ ಖಾತೆಗೆ ಜಮ ಆಗುತ್ತಿದೆ. ಉಚಿತ ಅಕ್ಕಿ, ಮಹಿಳೆಯರಿಗೆ ಸರ್ಕಾರಿ ಬಸ್‌ಗಳಲ್ಲಿ ಉಚಿತ ಪ್ರಯಾಣ. ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಇವರುಗಳು ಬಡವರ ಜೇಬು ತುಂಬಿಸುವ ಕೆಲಸ ಮಾಡುತ್ತಿದ್ದಾರೆ. ದೇಶದ ಪ್ರಧಾನಿ ಮೋದಿ ಅದಾನಿ, ಅಂಬಾನಿ ಇವರ ಜೇಬುಗಳನ್ನು ತುಂಬಿಸುವಲ್ಲಿ ಕಾಳಜಿ ವಹಿಸಿದ್ದಾರೆ. ಮನಮೋಹನ್‌ಸಿಂಗ್ ದೇಶದ ಪ್ರಧಾನಿಯಾಗಿದ್ದಾಗ ಎಪ್ಪತ್ತು ಸಾವಿರ ಕೋಟಿ ರೂ. ರೈತರ ಸಾಲ ಮನ್ನ ಮಾಡಿದ್ದರು ಎಂದು ಕಾಂಗ್ರೆಸ್ ಮತ್ತು ಬಿಜೆಪಿ.ಗಿರುವ ವ್ಯತ್ಯಾಸವನ್ನು ತಿಳಿಸಿದರು.

ಮಾಜಿ ಸಚಿವ ಹೆಚ್.ಆಂಜನೇಯ ಮಾತನಾಡುತ್ತ ರಾಹುಲ್‌ಗಾಂಧಿರವರ ಭಾರತ್ ಜೋಡೋ ಯಾತ್ರೆ ವಿಶ್ವದಲ್ಲಿಯೇ ಇತಿಹಾಸ ಸೃಷ್ಠಿಸಿದೆ. ಒಡೆದು ಹೋಗಿರುವ ಮನಸ್ಸುಗಳನ್ನು ಕಟ್ಟುವ, ಬೆಸೆಯುವ ಯಾತ್ರೆಯಿಂದ ಬಿಜೆಪಿ.ಗೆ ನಡುಕ ಉಂಟಾಗಿದೆ. ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ, ದಿನನಿತ್ಯದ ವಸ್ತುಗಳ ಬೆಲೆ ಏರಿಕೆಯಾಗಿದೆ. ಪ್ರಧಾನಿ ಮೋದಿ ದೇಶದ ಮೂರ್‍ನಾಲ್ಕು ಉದ್ಯಮಿಗಳನ್ನು ಶ್ರೀಮಂತರನ್ನಾಗಿಸಿದ್ದಾರೆ. 2024 ರಲ್ಲಿ ನಡೆಯುವ ಲೋಕಸಭಾ ಚುನಾವಣೆಯನ್ನು ಪ್ರತಿಯೊಬ್ಬರು ಗಂಭೀರವಾಗಿ ತೆಗೆದುಕೊಂಡು ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಬೇಕು ಎಂದು ಕಾರ್ಯಕರ್ತರಲ್ಲಿ ಮನವಿ ಮಾಡಿದರು.

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಸಂಘಟಿತ ಕಾರ್ಮಿಕ ವಿಭಾಗದ ರಾಜ್ಯಾಧ್ಯಕ್ಷ ಜಿ.ಎಸ್.ಮಂಜುನಾಥ್ ಮಾತನಾಡಿ ರಾಹುಲ್‌ಗಾಂಧಿರವರ ಭಾರತ್ ಜೋಡೋ ಯಾತ್ರೆಯನ್ನು ನೋಡಿದಾಗ ದೇಶದ ಸ್ವಾತಂತ್ರ್ಯಕ್ಕಾಗಿ ಬ್ರಿಟೀಷರ ವಿರುದ್ದ ನಮ್ಮ ಹಿರಿಯರು ನಡೆಸಿದಂತ ಹೋರಾಟ ನೆನಪಾಗುತ್ತದೆ. ಯಾತ್ರೆಯಲ್ಲಿ ಲಕ್ಷಾಂತರ ಜನ ಬೆಂಬಲಿಸಿದರು. ನಾನು ಕೂಡ ಸ್ವಲ್ಪ ದೂರ ಯಾತ್ರೆಯಲ್ಲಿ ಹೆಜ್ಜೆ ಹಾಕಿದ್ದೇನೆ. ಕಾಂಗ್ರೆಸ್ ಪಕ್ಷದಲ್ಲಿ ಸದಸ್ಯನಾಗುವುದೆ ಒಂದು ಪುಣ್ಯ. ಭಾರತ್ ಜೋಡೋ ಯಾತ್ರೆ ಕಾರ್ಯಕರ್ತರಲ್ಲಿ ಹುರುಪು ತುಂಬಿದ್ದರಿಂದ ವಿಧಾನಸಭೆ ಚುನಾವಣೆಯಲ್ಲಿ ಪಕ್ಷಕ್ಕೆ ಬಹುಮತ ಸಿಕ್ಕಿದೆ. ಕಾಂಗ್ರೆಸ್ ಉದ್ಘಾಟನೆ ಮಾಡಿರುವ ಬಹಳಷ್ಟು ಕಾರ್ಯಕ್ರಮಗಳು ಭಾರತ್ ಹೆಸರಿನಲ್ಲಿದೆ. ಈಗಿನ ಪ್ರಧಾನಿ ಮೋದಿ ಇಂಡಿಯಾವನ್ನು ಭಾರತ್ ಎಂದು ಬದಲಿಸಲು ಹೊರಟಿದ್ದಾರೆ. ಅದಕ್ಕೆ ಯಾರೂ ವಿರೋಧ ಮಾಡಿಲ್ಲ ಎಂದು ಹೇಳಿದರು.

ಅಡುಗೆ ಅನಿಲ ಬೆಲೆಯನ್ನು ಕೇಂದ್ರ ಸರ್ಕಾರ ಇನ್ನೂರು ರೂ. ಕಡಿಮೆಗೊಳಿಸಿರುವುದು ಚುನಾವಣಾ ಗಿಮಿಕ್. ಕಾಂಗ್ರೆಸ್ ಪಕ್ಷದ ಯೋಜನೆಗಳನ್ನು ಎಲ್ಲಾ ಕಡೆ ಪಸರಿಸಬೇಕು ಎಂದು ಕಾರ್ಯಕರ್ತರಿಗೆ ಸೂಚಿಸಿದರು.

ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಮಾತನಾಡುತ್ತ ಕಳೆದ ವರ್ಷ ಸೆ.7 ರಂದು ಕಾಶ್ಮೀರದಿಂದ ಕನ್ಯಾಕುಮಾರಿವರೆಗೆ ರಾಹುಲ್‌ಗಾಂಧಿ ಕೈಗೊಂಡ ಭಾರತ್ ಜೋಡೋ ಯಾತ್ರೆ ಎಲ್ಲಾ ಜಾತಿ ಧರ್ಮದವರನ್ನು ಒಗ್ಗೂಡಿಸಲು ನೆರವಾಯಿತು. ಇದರಿಂದ ಬಿಜೆಪಿ. ವೈಫಲ್ಯವನ್ನು ಜನರಿಗೆ ತಿಳಿಸಿದಂತಾಯಿತು. ಮುಂಬರುವ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಲೋಕಸಭಾ ಚುನಾವಣೆಯಲ್ಲಿ ಪಕ್ಷವನ್ನು ಗೆಲ್ಲಿಸಿ ಅಧಿಕಾರಕ್ಕೆ ತರುವಂತೆ ಕಾರ್ಯಕರ್ತರಲ್ಲಿ ವಿನಂತಿಸಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ಕಾರ್ಯಾಧ್ಯಕ್ಷ ಕೆ.ಎಂ.ಹಾಲಸ್ವಾಮಿ, ಪ್ರಧಾನ ಕಾರ್ಯದರ್ಶಿಗಳಾದ ಡಿ.ಎನ್. ಮೈಲಾರಪ್ಪ, ಸಂಪತ್‌ಕುಮಾರ್, ಉಪಾಧ್ಯಕ್ಷರುಗಳಾದ ಜಿ.ಎಸ್. ಕುಮಾರ್‌ಗೌಡ, ಡಿ.ಟಿ.ವೆಂಕಟೇಶ್, ನಜ್ಮತಾಜ್, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಆರ್. ಕೆ.ಸರ್ದಾರ್, ಹಿಂದುಳಿದ ವರ್ಗಗಳ ವಿಭಾಗದ ಜಿಲ್ಲಾಧ್ಯಕ್ಷ ಎನ್.ಡಿ.ಕುಮಾರ್, ಕೆ.ಪಿ.ಸಿ.ಸಿ. ಮಹಿಳಾ ರಾಜ್ಯ ಪ್ರಧಾನ ಕಾರ್ಯದರ್ಶಿ ಮುನಿರಾ ಎ.ಮಕಾಂದಾರ್, ಮೆಹಬೂಬ್ ಖಾತೂನ್, ಸೇವಾದಳದ ಇಂದಿರಾ, ನಗರಸಭೆ ಮಾಜಿ ಉಪಾಧ್ಯಕ್ಷ ಎಂ.ಹನೀಫ್, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಲಕ್ಷ್ಮಿಕಾಂತ್, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆರ್.ಪ್ರಕಾಶ್, ಅಲ್ಪಸಂಖ್ಯಾತ ವಿಭಾಗದ ಅಧ್ಯಕ್ಷ ಅಬ್ದುಲ್ಲಾ, ವಿವಿಧ ಮುಂಚೂಣಿ ಘಟಕಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಭಾರತ್ ಜೋಡೋ ಯಾತ್ರೆ ಪ್ರಥಮ ವಾರ್ಷಿಕೋತ್ಸವ ಮೆರವಣಿಗೆಯಲ್ಲಿ ಭಾಗವಹಿಸಿದ್ದರು. ಹೊಳಲ್ಕೆರೆ ರಸ್ತೆಯಲ್ಲಿರುವ ಕನಕ ವೃತ್ತದಿಂದ ಆರಂಭಗೊಂಡ ಮೆರವಣಿಗೆ ಸಂಗೊಳ್ಳಿರಾಯಣ್ಣ ವೃತ್ತ, ಗಾಂಧಿ ವೃತ್ತ, ಎಸ್.ಬಿ.ಎಂ.ಸರ್ಕಲ್, ಅಂಬೇಡ್ಕರ್ ಪ್ರತಿಮೆ ಮುಂಭಾಗದಿಂದ ಮದಕರಿ ವೃತ್ತ, ಒನಕೆ ಓಬವ್ವ ವೃತ್ತದ ಮೂಲಕ ಕಾಂಗ್ರೆಸ್ ಕಚೇರಿಗೆ ತಲುಪಿತು.

# ರಾಜ್ಯದಲ್ಲಿ ಯುವಜನ ಆಯೋಗ ರಚನೆ ಒತ್ತಾಯ

» ಚಿತ್ರದುರ್ಗ




ಕರ್ನಾಟಕ ರಾಜ್ಯದಲ್ಲಿ ಯುವಜನ ಆಯೋಗವನ್ನು ರಚನೆ ಮಾಡಬೇಕು ಎಂದು ಯುವಜನ ಆಯೋಗ ಹೋರಾಟ ಸಮಿತಿಯ ಸಂಚಾಲಕರಾದ ಅಜಯ್ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ನಗರದ ಪತ್ರಿಕಾಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಮಹಿಳೆ ಮತ್ತು ಮಕ್ಕಳ ಆಯೋಗ ಇದ್ದು, ಇದೇ ಮಾದರಿಯಲ್ಲಿ ಯುವ ಜನರಿಗಾಗಿ ಆಯೋಗವನ್ನು ರಚನೆ ಮಾಡುವುದು ಅಗತ್ಯವಾಗಿದೆ. ಇದರಲ್ಲಿ ಯುವಜನಕ್ಕೆ ಸಂಬಂಧಿಸಿದ ವಿವಿಧ ರೀತಿಯ ಸಮಸ್ಯೆ ಹಾಗೂ ಹಕ್ಕುಗಳನ್ನು ಪಡೆಯಲು ಅನುಕೂಲ ಆಗಲಿದೆ. ದೇಶದ ವಿವಿಧ ರಾಜ್ಯಗಳಲ್ಲಿ ಯುವಜನ ಆಯೋಗ ರಚನೆಗೊಂಡಿದೆ. ಆದರೆ ಕರ್ನಾಟಕದಲ್ಲಿ ಯುವಜನ ಆಯೋಗವನ್ನು ರಚನೆ ಮಾಡುವಂತೆ ಕಳೆದ 30 ವರ್ಷಗಳಿಂದ ಹೋರಾಟ ಮಾಡಿಕೊಂಡು ಬರಲಾಗಿದೆ. ಆದರೆ ಇದೂವರೆಗೂ ಕೂಡ ರಚನೆ ಆಗಿಲ್ಲ ಎಂದು ದೂರಿದರು

ದೇಶದ ಬೆನ್ನೆಲುಬು ಯುವಜನತೆ ಎನ್ನುವ ಈ ಸಮಯದಲ್ಲಿ ಆಡಳಿತ ಪಕ್ಷಗಳು ಅವರನ್ನು ನಿರ್ಲಕ್ಷ್ಯ ಮಾಡುತ್ತಿದೆ. ಚುನಾವಣೆ ಸಂದರ್ಭದಲ್ಲಿ ಯುವಜನರನ್ನು ಬಳಕೆ ಮಾಡಿಕೊಳ್ಳುವ ರಾಜಕೀಯ ಪಕ್ಷಗಳು ಅವರ ಕಷ್ಟಗಳಿಗೆ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿದ ಅವರು, ಯುವಜನತೆಗೆ ಆಯೋಗವನ್ನು ರಚನೆ ಮಾಡುವ ಮೂಲಕ ಅವರ ಹಕ್ಕುಗಳನ್ನು ಸಂರಕ್ಷಣೆ ಮಾಡಬೇಕಿದೆ ಎಂದು ಒತ್ತಾಯಿಸಿದರು.

ಯುವಜನರ ಗೌರವಕ್ಕೆ ದಕ್ಕೆ ಬಾರದ ರೀತಿಯಲ್ಲಿ ಶೋಷಣೆ ಮುಕ್ತ ಸಮಾಜವನ್ನು ನಿರ್ಮಾಣ ಮಾಡಬೇಕಿದೆ. ಸಂವಿಧಾನ ದತ್ತವಾದ ಹಕ್ಕು ಮತ್ತು ಕರ್ತವ್ಯಗಳನ್ನು ಕಾಪಾಡಬೇಕಿದೆ ಎಂದು ಆಗ್ರಹಿಸಿದ ಅವರು ಆಯೋಗ ರಚನೆ ಮಾಡಬೇಕು ಎಂದು ಒತ್ತಾಯಿಸುವ ಸಲುವಾಗಿ ಮುಖ್ಯಮಂತ್ರಿಗಳನ್ನು ಶೀಘ್ರದಲ್ಲೇ ಭೇಟಿ ಮಾಡಲಾಗುವುದು ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಪುರುಷೋತ್ತಮ, ಜಯಶ್ರೀ ಸೂರಯ್ಯ ಸೇರಿದಂತೆ ಇತರರು ಹಾಜರಿದ್ದರು.

### ಭಾರತ್ ಜೋಡೋ ಪಾದಯಾತ್ರೆಗೆ ಮೊಳಕಾಲ್ಮುರುವಿನಿಂದ ಜನರನ್ನು ಕಳಿಸಿದ್ದೆ: ಎನ್.ವೈ ಗೋಪಾಲಕೃಷ್ಣ

» ಚಿತ್ರದುರ್ಗ

ನನ್ನ ದೇಹ ಬಿಜೆಪಿ.ಯಲ್ಲಿತ್ತು. ಮನಸ್ಸು ಮಾತ್ರ ಕಾಂಗ್ರೆಸ್‌ನಲ್ಲಿದ್ದ ಕಾರಣಕ್ಕಾಗಿ ರಾಹುಲ್‌ಗಾಂಧಿ ಭಾರತ್ ಜೋಡೋ ಪಾದಯಾತ್ರೆಗೆ ಮೊಳಕಾಲ್ಮುರುವಿನಿಂದ ಜನರನ್ನು ಕಳಿಸಿದ್ದೆ ಎಂದು ಮೊಳಕಾಲ್ಮುರು ಶಾಸಕ ಎನ್.ವೈ.ಗೋಪಾಲಕೃಷ್ಣ ತಮ್ಮ ಅಂತರಾಳದ ಇಂಗಿತವನ್ನು ವ್ಯಕ್ತಪಡಿಸಿದರು. ಕಾಶ್ಮೀರದಿಂದ ಕನ್ಯಾಕುಮಾರಿವರೆಗೆ ರಾಹುಲ್‌ಗಾಂಧಿ ಕಳೆದ ವರ್ಷ ಸೆ.7 ರಂದು ಆರಂಭಿಸಿದ ಭಾರತ್ ಜೋಡೋ ಪಾದಯಾತ್ರೆ ಅಂಗವಾಗಿ ಜಿಲ್ಲಾ ಕಾಂಗ್ರೆಸ್‌ನಿಂದ ಭಾನುವಾರ ನಗರದಲ್ಲಿ ಹಮ್ಮಿಕೊಳ್ಳಲಾಗಿದ್ದ ಪ್ರಥಮ ವಾರ್ಷಿ ಕೋತ್ಸವ ಮೆರವಣಿಗೆಯಲ್ಲಿ ಭಾಗವಹಿಸಿ ಮಾತನಾಡಿದರು.

ಕೆಲವು ಅನಿವಾರ್ಯ ಕಾರಣಗಳಿಂದಾಗಿ ಕಾಂಗ್ರೆಸ್ ತೊರೆದು ಬಿಜೆಪಿ.ಗೆ ಹೋಗಿ ಕೂಡ್ಲಿಗಿಯಿಂದ ಸ್ಪರ್ಧಿಸಿ ಶಾಸಕನಾಗಿದ್ದರೂ ನನ್ನ ಮನಸ್ಸೆಲ್ಲಾ ಕಾಂಗ್ರೆಸ್ ಕಡೆಯಿತ್ತು. ಆಗ ಡಿ.ಸುಧಾಕರ್ ಕೇಳಿದ್ದರಿಂದ ಭಾರತ್ ಜೋಡೋ ಯಾತ್ರೆಯಲ್ಲಿ ಸಾವಿರಾರು ಸಂಖ್ಯೆಯಲ್ಲಿ ಜನರನ್ನು ಕಳಿಸಿದ್ದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಅಲ್ಪಸಂಖ್ಯಾತರು ಕಾಂಗ್ರೆಸ್ ಇರುವತನಕ ಪಕ್ಷವನ್ನು ಕೈಬಿಡಲ್ಲ. ರಾಹುಲ್‌ಗಾಂಧಿ ಸ್ವಂತಕ್ಕಾಗಿ ಭಾರತ್ ಜೋಡೋ ಯಾತ್ರೆ ಮಾಡಲಿಲ್ಲ. ಸಂವಿಧಾನದ ಮೇಲೆ ಅತಿಕ್ರಮವಾಗುತ್ತಿರುವುದನ್ನು ದೇಶದ ಜನರಿಗೆ ತಿಳಿಸಿ ಎಚ್ಚರಿಸುವುದಕ್ಕಾಗಿ ಕಾಶ್ಮೀರದಿಂದ ಕನ್ಯಾಕುಮಾರಿವರೆಗೆ ಹೊರಟರು. ಮುಂದೆ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಲೋಕಸಭೆ ಚುನಾವಣೆ ಎದುರಾಗಲಿದೆ. ಈಗಿನಿಂದಲೆ ಎಲ್ಲರೂ ಒಟ್ಟಾಗಿ ಪಕ್ಷದ ಗೆಲುವಿಗಾಗಿ ಶ್ರಮಿಸಬೇಕೆಂದು ಕಾರ್ಯಕರ್ತರಿಗೆ ಕರೆ ನೀಡಿದರು.

### ಲೋಕಾಯುಕ್ತ ಅಧಿಕಾರಿಗಳಿಂದ ಅಹವಾಲು ಸ್ವೀಕಾರ

ದಾವಣಗೆರೆ: ದಾವಣಗೆರೆ ಘಟಕದ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳು ಸೆ.13 ರಂದು ಚನ್ನಗಿರಿ ತಾಲ್ಲೂಕು ಪ್ರವಾಸ ಕೈಗೊಳ್ಳಲಿದ್ದು ಸಾರ್ವಜನಿಕರು ತಮ್ಮ ದೂರುಗಳನ್ನು ಸಲ್ಲಿಸಬಹುದು.. ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಎಸ್ ಕೌಲಾಪೂರೆ ಅವರು ಸೆ. 13 ರಂದು ಚನ್ನಗಿರಿ ಪ್ರವಾಸಿ ಮಂದಿರದಲ್ಲಿ, ಬೆಳಿಗ್ಗೆ 11.30 ರಿಂದ ಮಧ್ಯಾಹ್ನ 1.30ರವರೆಗೆ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು. ಸಾರ್ವಜನಿಕರು ಸರ್ಕಾರದ ವಿವಿಧ ಇಲಾಖೆಗಳಿಗೆ ಸಲ್ಲಿಸಿದ ಅರ್ಜಿಗಳನ್ನು ಇತ್ಯರ್ಥ ಮಾಡದ ಬಗ್ಗೆ ತಮ್ಮ ದೂರು ಹಾಗೂ ಅಹವಾಲುಗಳನ್ನು ಸಲ್ಲಿಸಬಹುದು. ನ್ಯಾಯಾಲಯದಲ್ಲಿ ವಿಚಾರಣೆ ಬಾಕಿ ಇದ್ದರೆ, ಅಂತಹ ದೂರುಗಳನ್ನು ಸ್ವೀಕರಿಸಲಾಗುವುದಿಲ್ಲ.

## ಪ್ರಮುಖ ಸುದ್ದಿ

# ಮುಷ್ಕರ ನಿರತರ ಬಳಿ ತೆರಳಿ ಸಮಸ್ಯೆ ಆಲಿಸಿದ ಸುಧಾಕರ್

» ಚಿತ್ರದುರ್ಗ



ವೇದಾಂತ ಗಣಿ ಗುತ್ತಿಗೆ ಕಂಪನಿಯಿಂದ ಮೂರನೆ ಗೇಟ್ ಮುಖಾಂತರ ಕಳೆದ ಹದಿನೈದು ವರ್ಷಗಳಿಂದಲೂ ಅದಿರು ಸಾಗಿಸುತ್ತಿದ್ದ ಲಾರಿಗಳ ಸಂಚಾರವನ್ನು ಕೆಲವು ಪಟ್ಟಭದ್ರಹಿತಾಸಕ್ತಿಗಳು ಮುಚ್ಚಿಸಿರುವುದನ್ನು ವಿರೋಧಿಸಿ ಆರು ದಿನಗಳಿಂದ ಒನಕೆ ಓಬವ್ವ ವೃತ್ತದಲ್ಲಿ ಲಾರಿ ಮಾಲೀಕರು ಹಾಗೂ ಚಾಲಕರು ನಡೆಸುತ್ತಿರುವ ಧರಣಿ ಸ್ಥಳಕ್ಕೆ ಭಾನುವಾರ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಭೇಟಿ ನೀಡಿ ಸಮಸ್ಯೆಗಳನ್ನು ಆಲಿಸಿದರು.

ಚಿತ್ರದುರ್ಗ, ಬಳ್ಳಾರಿ, ಕೊಪ್ಪಳ ಜಿಲ್ಲೆಗಳಿಂದ ಒಂದುವರೆ ಸಾವಿರ ಲಾರಿಗಳು ಮೂರನೆ ಗೇಟ್ ಮುಖಾಂತರ ಅದಿರನ್ನು ಸಾಗಿಸುತ್ತಿದ್ದವು. ಸ.ನಂ. 5, 6 ರ ಬಿದಿರು ಬೊಮ್ಮೇನಹಳ್ಳಿಯಲ್ಲಿ ಲಾರಿಗಳನ್ನು ಅರ್ಧ ಕಿ.ಮೀ. ಸಂಚರಿಸಲು ಅರಣ್ಯ ಇಲಾಖೆಯವರು ಅಡ್ಡಿಪಡಿಸುತ್ತಿದ್ದಾರೆ. ಪಹಣಿ ಯಲ್ಲಿ ಕಂದಾಯ ಇಲಾಖೆಗೆ ಸೇರಿದ ಜಮೀನು ಎಂದು ನಮೂದಾಗಿದೆ. 2017 ರ ನೋಟಿಫಿಕೇಷನ್ ಪ್ರಕಾರ 2023 ರವರೆಗೂ ನಿರಂತರವಾಗಿ ಅದಿರನ್ನು ಸಾಗಿಸಲಾಗುತ್ತಿತ್ತು. ಈಗ ಏಕಾಏಕಿ ಲಾರಿಗಳ ಸಂಚಾರ ಸ್ಥಗಿತಗೊಳಿಸಿರುವುದರಿಂದ ಇದನ್ನೆ ನಂಬಿಕೊಂಡಿರುವ 25 ಸಾವಿರಕ್ಕೂ ಹೆಚ್ಚು ಕುಟುಂಬಗಳು ಬೀದಿಗೆ ಬಂದಿವೆ ಎಂದು ಮುಷ್ಕರ ನಿರತ ಲಾರಿ ಮಾಲೀಕರು ಹಾಗೂ ಚಾಲಕರುಗಳು ಜಿಲ್ಲಾ ಉಸ್ತುವಾರಿ ಸಚಿವರಲ್ಲಿ ಅಳಲು ತೋಡಿಕೊಂಡರು.

ಲಾರಿ ಮಾಲೀಕರು, ಚಾಲಕರುಗಳ ವೇದನೆ ಆಲಿಸಿದ ಸಚಿವ ಡಿ.ಸುಧಾಕರ್ ಸಂಬಂಧಪಟ್ಟ ಗಣಿ ಹಾಗೂ ಅರಣ್ಯ ಇಲಾಖೆ ಸಚಿವರು ಹಾಗೂ ಅಧಿಕಾರಿಗಳ ಜೊತೆ ಚರ್ಚಿಸಿ ಸೋಮವಾರದ ನಂತರ ಸಮಸ್ಯೆಗಳನ್ನು ಬಗೆಹರಿಸುವುದಾಗಿ ಧರಣಿನಿರತರಿಗೆ ಭರವಸೆ ನೀಡಿದರು.

ಮಾಜಿ ಸಚಿವ ಹೆಚ್.ಆಂಜನೇಯ, ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ಶಾಸಕ ಟಿ.ರಘುಮೂರ್ತಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಕೆ.ಪಿ.ಸಿ.ಸಿ. ಅಸಂಘಟಿತ ಕಾರ್ಮಿಕ ವಿಭಾಗದ ರಾಜ್ಯಾಧ್ಯಕ್ಷ ಜಿ.ಎಸ್.ಮಂಜುನಾಥ್ ಈ ಸಂದರ್ಭದಲ್ಲಿದ್ದರು.

# ಹೊಳಲ್ಕೆರೆ: ವಿವಾಹ ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿದ್ದ 2 ಕುಟುಂಬದ ದಂಪತಿ ಒಗ್ಗೂಡಿಸಿದ ನ್ಯಾ.ಶರವಣ್

» ಎಸ್.ವೇದಮೂರ್ತಿ

» ಹೊಳಲ್ಕೆರೆ

ಪಟ್ಟಣದ ನ್ಯಾಯಾಲಯದ ಆವರಣದಲ್ಲಿ ಶನಿವಾರ ನಡೆದ ರಾಷ್ಟ್ರೀಯ ಲೋಕಾದಲತ್‌ನಲ್ಲಿ ಬ್ಯಾಂಕ್, ಚೆಕ್, ವಿಭಾಗ, ಮತ್ತು ವಿವಾಹ ವಿಚ್ಛೇದನಕ್ಕೆ ಸಲ್ಲಿಸಿದ್ದ ಹಲವಾರು ಪ್ರಕರಣಗಳು ಇತ್ಯಾರ್ಥಗೊಳಿಸಲಾಗಿದೆ.

ಪ್ರಮುಖವಾಗಿ ಲೋಕಾ ಅದಾಲತ್ ಕಟ್ಟೆಯಲ್ಲಿದ್ದ ಎರಡು ವಿವಾಹ ವಿಚ್ಛೇದನ ಪ್ರಕರಣಗಳಲ್ಲಿ ದಂಪತಿಗಳನ್ನು ಒಂದು ಗೂಡಿಸಿ ಸುಖ ಜೀನವ ನಡೆಸಲು ಪ್ರೋತ್ಸಾಹ ನೀಡಿ, ಪ್ರಕಣವನ್ನು ಇತ್ಯಾರ್ಥಗೊಳಿಸಿದ ಹಿರಿಯ ಸಿವಿಲ್ ನ್ಯಾಯಾಲಯದ ನ್ಯಾಯಾಧೀಶರಾದ ಎಸ್.ಶರವಣ ಇಲ್ಲಿ ಹೊಸ ದಾಖಲೆ ಸೃಷ್ಟಿಸಿದ್ದಾರೆ. ಕುಟುಂಬಗಳಲ್ಲಿ ಉಂಟಾಗುವ ವೈಮನಸ್ಸುಗಳನ್ನು ಕಟ್ಟು ಕೆಲಸ ಸಾಮಾನ್ಯದಲ್ಲ. ಹಲವು ಕಾರಣಗಳಿಂದಘಟಾನುಘಾಟಿದಂಪತಿಗಳ ನಡುವೆ ವ್ಯಾಜ್ಯಗಳು ಉಂಟಾಗಿ ಕೊನೆಗೆ ವಿವಾಹ ವಿಚ್ಛೇದನಕ್ಕಾಗಿ ನ್ಯಾಯಾಲಯಕ್ಕೆ ಬರುತ್ತಾರೆ. ಎಷ್ಟೋ ಪ್ರಕಣಗಳಲ್ಲಿ ವಿವಾಹ ವಿಚ್ಛೇದನ ಪಡೆದ ಘಟನೆಗಳಿವೆ. ಅದರೇ ವಿವಾಹ ವಿಚ್ಛೇನಕ್ಕೆ ಮುಂದಾಗಿದ್ದ ದಂಪತಿಗಳನ್ನು ಒಂದು ಗೋಡಿಸುವ ಮೂಲಕ ಹೊಸಜೀವನಕ್ಕೆ ಮುನ್ನುಡಿ ಬರೆಯುವಂತ ಹೊಸ ಸಹಾಸದ ಕೆಲಸಗಳನ್ನು ಇಲ್ಲಿನ ನ್ಯಾಯಾಧೀಶರು ಮಾಡಿದ್ದಾರೆ.



ತಾಲ್ಲೂಕಿನ ತಾಳಿಕಟ್ಟೆಯ ಬಸವರಾಜ್ ಹಾಗೂ ವಿಜಯ ಹಾಗೂ ಮಲ್ಲಾಡಿಹಳ್ಳಿ ಶ್ವೇತಾ ನವಿನ್ ದಂಪತಿಗಳು ಹಿರಿಯ ಸಿವಿಲ್ ನ್ಯಾಯಾಲಯಕ್ಕೆ ಸಲ್ಲಿಸಲಾಗಿದ್ದ ವಿವಾಹ ವಿಚ್ಛೇದನ ಅರ್ಜಿಯನ್ನು ಶನಿವಾರ ನಡೆದ ಲೋಕದಲತ್‌ನಲ್ಲಿ ನ್ಯಾಯಾಧೀಶ ಎಸ್.ಶರವಣನ್ ನೇತೃತ್ವದಲ್ಲಿ ವಕೀಲರಾದ ಎಸ್. ವೇದಮೂರ್ತಿ, ಎಸ್.ವಿಜಯ, ಎನ್. ಹೆಚ್.ಶಾಂತವೀರಪ್ಪ, ಬಿ.ಎಸ್.ಪ್ರಭಕರ್ ಮಧ್ಯಸ್ಥಿಕೆಯಲ್ಲಿ ಇತ್ಯಾರ್ಥಗೊಳಿಸಿದೆ.

ತಾಲೂಕಿನ ಮಲ್ಲಾಡಿಹಳ್ಳಿ ಅಮೃತ್ ಅಗ್ಯಾನಿಕ್ ಸಂಸ್ಥೆ ಉದ್ಯೋಗಿ ಶ್ವೇತಾ ನವಿನ್ ದಂಪತಿಗಳು ವಿವಾಹ ವಿಚ್ಛೇದನಕ್ಕೆ ನ್ಯಾಯಾಲಯದಲ್ಲಿ 2020 ರಲ್ಲಿ ಅರ್ಜಿ ಸಲ್ಲಿಸಿದ್ದರು.ದಂಪತಿಗಳಿಗೆ4ವರ್ಷದಮಗು ಇದೆ. ಇಬ್ಬರ ನಡುವೆ ಕ್ರೀಮಿನಲ್ ಪ್ರಕರಣ ದಾವಣಗೆರೆ ನ್ಯಾಯಾಲಯದಲ್ಲಿ ಇತ್ತು. ಸುಖಸಂಸಾರಕ್ಕಾಗಿ ರಾಜಿ ಮಾಡಿಕೊಂಡು ಪರಸ್ಪರ ಪ್ರೀತಿ ಹೊಂದಾಣಿಕೆ ಯಿಂದ ಜೀವನ ನಡೆಸಬೇಕು ಎನ್ನುವ ತಿಳುವಳಿಕೆ ಹೇಳಿದ ಹಿನ್ನೆಲೆಯಲ್ಲಿ ನ್ಯಾಯಾಧೀಶರಾದ ಶರವಣನ್ ನೇತೃತ್ವದಲ್ಲಿ, ವಕೀಲರಾದ ಎಸ್.ವೇದಮೂರ್ತಿ, ಎಸ್.ವಿಜಯ ಹಾಗೂ ಮಧ್ಯಸ್ಥಿಕೆಗಾರಾದ ಪ್ರೇಮಾ ಸಮಕ್ಷಮ ಲೋಕಾದಲತ್‌ನಲ್ಲಿ ರಾಜಿ ಮಾಡಿಕೊಂಡು ಒಂದುಗೊಂಡಿ ಸಂತಸಗೊಂಡಿದ್ದಾರೆ. ತಾಲೂಕಿನ ತಾಳಿಕಟ್ಟೆನಿವಾಸಿ ಬಸವರಾಜ್ ವಿಜಯಮ್ಮ ವಿವಾಹವನ್ನು ವಿಚ್ಛೇದನ ಗೊಳಿಸುವಂತೆ ಕೋರಿ 2023ರಲ್ಲಿ ವಿವಾಹ ವಿಚ್ಛೇದನಕ್ಕೆ ವಿವಾಹಕ್ಕೆ ಅರ್ಜಿ ಸಲ್ಲಿಸಿದರು. ಈ ಹಿನ್ನೆಲೆಯಲ್ಲಿನ್ಯಾಯಾಧೀಶರಸಮ್ಮುಖದಲ್ಲಿ ನಡೆದ ಮಧ್ಯಸ್ಥಿಕೆಯಿಂದಾಗಿ ಪರಸ್ಪರರು ಜೀವನವನ್ನು ಮುಂದುವರಿಸಬೇಕು ಎನ್ನುವ ತೀರ್ಮಾನಕ್ಕೆ ಬಂದು ಶನಿವಾರ ಲೋಕದಲತ್ ನಲ್ಲಿ ಪುನಃವಿವಾಹವನ್ನು ಸ್ಥಾಪಿಸಿಕೊಳ್ಳುವುದರ ಮೂಲಕ ಹೊಸ ಜೀವನ ಆರಂಭಿಸುವ ವಿಶ್ವಾಸವನ್ನು ವ್ಯಕ್ತಪಡಿಸಿದ್ದು, ಲೋಕಾದಲತ್ ನಲ್ಲಿ ರಾಜಿ ಮಾಡಿಕೊಂಡಿರುತ್ತಾರೆ. ಇಬ್ಬರನ್ನು ಒಂದುಗೂಡಿಸಿದ ವಕೀಲರಾದ ಎನ್. ಹೆಚ್.ಶಾಂತವೀರಪ್ಪ, ಬಿ.ಎಸ್.ಪ್ರಭಕರ್ ಪ್ರಕರಣಗಳನ್ನು ಇತ್ಯಾರ್ಥಕ್ಕೆ ಶ್ರಮಿಸಿದ್ದಾರೆ. ಇದೆ ಸಮಯದಲ್ಲಿ ಮಧ್ಯಸ್ಥಿಕೆ ವಕೀಲರಾದ ಪೇಮಾ, ವಕೀಲರ ಸಂಘದ ಅಧ್ಯಕ್ಷ ಎಲ್. ಕೆ.ಶಿವಕುಮಾರ್. ಹಿರಿಯ ವಕೀಲರಾದ ಹನುಮಂತೆಗೌಡ, ವಿಜಯ್, ಜಿ.ಈ.ರಂಗಸ್ವಾಮಿ, ಜಿ.ಮುನಿಶ್ವರಪ್ಪ, ಎಸ್.ಜಿ.ರಂಗಸ್ವಾಮಿ, ಕೆ.ಎಸ್.ಜಯದೇವ, ಚಂದ್ರಹಾಸ್, ನಟರಾಜ್, ಬುರನ್ ಬೇಗಂ, ರವಿ. ಡಿ.ಜಯಣ್ಣ, ಸಂತೋಷಕುಮಾರ್, ಶಶಿಧರ್, ದಿನಕರ್ ಸೇರಿದಂತೆ ವಕೀಲರ ಸಂಘದ ಸದಸ್ಯರು ಇದ್ದರು.

## ಫಾಸ್ಟ್ ನ್ಯೂಸ್

### ಶ್ರೀಸೋಮೇಶ್ವರ ವಿದ್ಯಾಲಯದಲ್ಲಿ ಸಂಭ್ರಮದ ಓಣಂ ಹಾಗೂ ಜನ್ಮಾಷ್ಟಮಿ




» ದಾವಣಗೆರೆ

ಗೋಣಿವಾಡ ಬಳಿಯ ಶ್ರೀ ಸೋಮೇಶ್ವರ ವಸತಿಯುತ ವಿದ್ಯಾಲಯದಲ್ಲಿ ಸಂಭ್ರಮ ಸಡಗರದಿಂದ ಶ್ರೀಕೃಷ್ಣ ಜನ್ಮಾಷ್ಟಮಿ ಹಾಗೂ ಓಣಂ ಆಚರಣೆ ಮಾಡಲಾಯಿತು. ಪೋಷಕರ ಸಹಕಾರದೊಂದಿಗೆ ನಡೆದ ಈ ಕಾರ್ಯಕ್ರಮದಲ್ಲಿ ಮುದ್ದಾದ ಮಕ್ಕಳು ರಾಧೆ ಕೃಷ್ಣನ ವೇಷ ಹಾಕಿಕೊಂಡು ಎಲ್ಲರ ಗಮನ ಸೆಳೆದರು.ರಾಧೆಯಾದ ವಿದ್ಯಾರ್ಥಿನಿಯರಿಗೆ ಕೃಷ್ಣನ ಪಾತ್ರದಲ್ಲಿ ಬಂದ ವಿದ್ಯಾರ್ಥಿಗಳು ಸಾಥ್ ನೀಡಿದರು. ಶ್ರೀಕೃಷ್ಣ ಹಾಗೂ ಓಣಂ ಹಾಡುಗಳಿಗೆ ಹೆಜ್ಜೆ ಹಾಕುವ ಮೂಲಕ ಶ್ರೀಕೃಷ್ಣನನ್ನ ಸ್ಮರಿಸಿದರು. ಪುಟ್ಟ ಪಟಾಣಿಗಳು ಶ್ರೀಕೃಷ್ಣನಂತೆ ಕಂಗೊಳಿಸುವ ಮೂಲಕ ಶಾಲಾ ವಾತಾವರಣವೇ ಹಬ್ಬದಂತೆ ಮಾರ್ಪಟ್ಟಿತ್ತು. ಈ ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ರುದ್ರಯ್ಯಜಿ ಆಗಮಿಸಿದ್ದರು. ಈ ವೇಳೆ ಸಂಸ್ಥೆಯ ಸಂಸ್ಥಾಪಕರು ಹಾಗೂ ಗೌರವ ಕಾರ್ಯದರ್ಶಿಗಳಾದ ಕೆ.ಎಂ ಸುರೇಶ್, ಪ್ರಾಂಶುಪಾಲರಾದ ಶ್ರೀಮತಿ ವೀಣಾ ವಿದ್ಯಾರ್ಥಿಗಳು ಪೋಷಕರು ಉಪಸ್ಥಿತರಿದ್ದರು.

### “ಮಹಾತ್ಮ ಗಾಂಧೀ ಸೇವಾ ಪ್ರಶಸ್ತಿ, ಕರ್ನಾಟಕ’ ಆಯ್ಕೆಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ರಾಜ್ಯ ಸರ್ಕಾರವು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಸ್ಥಾಪಿಸಿರುವ ಐದು ಲಕ್ಷ ರೂಪಾಯಿ ನಗದನ್ನು ಒಳಗೊಂಡ “ಮಹಾತ್ಮಗಾಂಧೀ ಸೇವಾ ಪ್ರಶಸ್ತಿ-ಕರ್ನಾಟಕ"ಗೆ ಪ್ರಸಕ್ತ ಸಾಲಿಗೆ ಅರ್ಹ ಸಾಧಕರನ್ನು ಅಥವಾ ಸಂಘ ಸಂಸ್ಥೆಗಳನ್ನು ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.ಸಾರ್ವಜನಿಕ ಜೀವನದಲ್ಲಿ ಮಹಾತ್ಮಗಾಂಧೀಜಿಯವರ ಆದರ್ಶಗಳನ್ನು ಅಳವಡಿಸಿಕೊಂಡು ಜೀವನ ನಡೆಸುತ್ತಿರುವ ಕನಿಷ್ಠ 60 ವರ್ಷಗಳಾಗಿರುವ ವ್ಯಕ್ತಿಗಳು ಅಥವಾ 25 ವರ್ಷಗಳು ತುಂಬಿರುವ ಸೇವಾ ಸಂಸ್ಥೆಗಳನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗುವುದು. ಪ್ರಶಸ್ತಿಯನ್ನು ಆಯ್ಕೆ ಮಾಡಲು ಆಯ್ಕೆ ಸಮಿತಿಯನ್ನು ರಚಿಸಲಾಗುವುದು. 2023 ರ ಅಕ್ಟೋಬರ್ 02 ರಂದು ಪ್ರಶಸ್ತಿ ಪ್ರದಾನ ಮಾಡಲಾಗುವುದು. ಮಹಾತ್ಮಗಾಂಧೀಜಿಯವರು ಪ್ರಚುರುಪಡಿಸಿದ ಜನಪರ ಕಾರ್ಯಕ್ರಮಗಳಾದ ಅಸ್ಪೃಶ್ಯತೆ ನಿವಾರಣೆ, ಅಹಿಂಸೆ, ಮಹಿಳಾ ಸಬಲೀಕರಣ, ಗ್ರಾಮೀಣ ನೈರ್ಮಲ್ಯ, ಮದ್ಯಪಾನ ವಿರೋಧಿ ನೀತಿ, ಖಾದಿ ಮತ್ತು ಸ್ವದೇಶಿವಸ್ತು ಬಳಕೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉದ್ಧಾರ, ಈ ಕ್ಷೇತ್ರಗಳಲ್ಲಿ ಸ್ವಯಂ ಪ್ರೇರಣೆಯಿಂದ ತೊಡಗಿರುವ ವ್ಯಕ್ತಿಗಳು ಅಥವಾ ಸಂಸ್ಥೆಗಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು. ಸಂಘ ಸಂಸ್ಥೆಗಳು ಅಥವಾ ವ್ಯಕ್ತಿಗಳು ಶಿಫಾರಸ್ಸನ್ನು ಕೂಡ ಮಾಡಬಹುದಾಗಿದೆ. ಸೆಪ್ಟಂಬರ್ 15 ರ ಒಳಗಾಗಿ ಅರ್ಜಿಗಳನ್ನು ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ, ನಂ. 17, ಭಗವಾನ್ ಮಹಾವೀರ ರಸ್ತೆ (ಇನ್‌ಫೆಂಟ್ರಿ ರಸ್ತೆ), ಬೆಂಗಳೂರು-560 001 ಅಥವಾ ಇ-ಮೇಲ್ : information diprawards@gmail.com ವಿಳಾಸಕ್ಕೆ ಕಳುಹಿಸಬಹುದಾಗಿದೆ.

### ಬೆಳೆವಿಮೆ ಸೆ.15ರೊಳಗೆ ಬೆಳೆ ಸಮೀಕ್ಷೆಗೆ ಸೂಚನೆ

» ಚಿತ್ರದುರ್ಗ

2023-24ನೇ ಸಾಲಿನ ಮುಂಗಾರು ಹಂಗಾಮಿನ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ (ಖ-ಘಃಅಃಖ) ಯೋಜನೆಯಲ್ಲಿ 2021-22, 2022-23ನೇ ಸಾಲಿನಲ್ಲಿ ಬೆಳೆ ಸಮೀಕ್ಷೆಯಾಗದ ಅಡಿಕೆ, ಮಾವು ಮತ್ತು ದಾಳಿಂಬೆ ಬೆಳೆಗಳಿಗೆ ಬೆಳೆ ವಿಮೆಗೆ ನೊಂದಾಯಿತ ರೈತರು ಇದೇ ಸೆಪ್ಟೆಂಬರ್ 15ರೊಳಗಾಗಿ ಬೆಳೆ ಸಮೀಕ್ಷೆ ಮಾಡಿಸಿಕೊಳ್ಳುವ ಷರತ್ತಿನ ಮೇಲೆ ಬೆಳೆ ವಿಮೆಗೆ ನೊಂದಾಯಿಸಿಕೊಳ್ಳಲಾಗಿರುತ್ತದೆ. ಈ ಕೂಡಲೇ ರೈತರು ಬೆಳೆ ಸಮೀಕ್ಷೆ ಮೊಬೈಲ್ ಆಪ್ ಅಥವಾ ಗ್ರಾಮದ ಬೆಳೆ ಸಮೀಕ್ಷೆದಾರರಿಂದ ಬೆಳೆ ಸಮೀಕ್ಷೆ ಮಾಡಿದಲ್ಲಿ ಈ ವರ್ಷದ ಬೆಳೆ ವಿಮೆ ಯೋಜನೆಯಡಿ ಅರ್ಹರಾಗಿರುತ್ತಾರೆ. ಇಲ್ಲವಾದಲ್ಲಿ ತಮ್ಮ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಆದುದರಿಂದ ರೈತರು ಈ ಕೂಡಲೇ ಬೆಳೆ ಸಮೀಕ್ಷೆಯನ್ನು ನಿಗಧಿತ ಸಮಯದೊಳಗೆ ಮಾಡಿಸಿಕೊಳ್ಳಲು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರವರ ಕಚೇರಿ ಮತ್ತು ಸಹಾಯಕ ತೋಟಗಾರಿಕೆ ಅಧಿಕಾರಿಗಳ ರೈತರ ಸಂಪರ್ಕ ಕೇಂದ್ರಗಳನ್ನು ಸಂಪರ್ಕಿಸಬಹುದು ಎಂದು ಚಿತ್ರದುರ್ಗ ತೋಟಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ಟಾಲಿನ್ ಹೇಳಿಕೆಗೆ ದಾಸಕರಿಯಪ್ಪ ಆಕ್ರೋಶ

» ದಾವಣಗೆರೆ

ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವ ಕೋಮು ಪ್ರಚೋದನೆ ಹಾಗೂ ರಾಷ್ಟ್ರದ್ರೋಹದ ಹೇಳಿಕೆ ನೀಡಿದ ತಮಿಳುನಾಡಿನ ಸಚಿವ ಉದಯನಿಧಿ ಸ್ಟಾಲಿನ್ ಹೇಳಿಕೆಯನ್ನು ಬಿಜೆಪಿ ಜಿಲ್ಲಾ ಘಟಕದ ಉಪಾಧ್ಯಕ್ಷ ಶ್ರೀನಿವಾಸ ದಾಸಕರಿಯಪ್ಪ ಪ್ರಕಟಣೆಯಲ್ಲಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸನಾತನ ಹಿಂದು ಧರ್ಮದ ಬಗ್ಗೆ ತಮಿಳುನಾಡು ಸಚಿವ ಉದಯನಿಧಿ ಸ್ಟಾಲಿನ್ ತನ್ನ ಹೆತ್ತ ತಾಯಿಯಿಂದ ಹಿಂದೂ, ಸಂಸ್ಕೃತಿ, ಸಂಸ್ಕಾರಗಳನ್ನು ಮೊದಲು ಕಲಿಯಲಿ. ಹಿಂದು ಧರ್ಮವನ್ನು ಅವಮಾನಿಸಿದೆದಂದರೆ ಹೆತ್ತ ತಾಯಿಯನ್ನೇ ಅವಮಾನಿಸಿದಂತೆ ಎಂಬುದನ್ನು ಉದಯನಿಧಿ ಅರಿಯಲಿ.

ತಮಿಳುನಾಡಿನ ಮುಖ್ಯಮಂತ್ರಿ ಪುತ್ರ ಎಂ.ಕೆ.ಸ್ಟಾಲಿನ್ ಪುತ್ರ, ಯುವ ಕಲ್ಯಾಣ ಮತ್ತು ಕ್ರೀಡಾ ಅಭಿವೃದ್ಧಿ, ವಿಶೇಷ ಕಾಯ್ದೆ ಅನುಷ್ಠಾನ ಇಲಾಖೆ ಸಚಿವರು, ಡಿ.ಎಂ.ಕೆ. ಪಕ್ಷದ ಯುವ ಘಟಕದ ಅಧ್ಯಕ್ಷನೂ ಆದ ಉದಯ ನಿಧಿ ಸ್ಟಾಲಿನ್ ಓಲೈಕೆ ಮತ್ತು ಮತ ಬ್ಯಾಂಕ್ ರಾಜಕೀಯ ಬಿಡಲಿ.



ಈ ರೀತಿಯ ಹೇಳಿಕೆಯನ್ನು ನೀಡಿದ್ದು, ನಮ್ಮ ಸನಾತನ ಧರ್ಮವನ್ನು ಡೆಂಗ್ಯೂ, ಕೊರೊನಾ, ಮಲೇರಿಯಾಕ್ಕೆ ಸಮಾನವಾದದ್ದು ಎಂಬ ಹೇಳಿಕೆ ನೀಡಿರುವುದು ಅಕ್ಷಮ್ಯ ಹಾಗೂ ಖಂಡನೀಯ.ಜವಾಬ್ದಾರಿಯುತ ಸ್ಥಾನದಲ್ಲಿರುವ ಉದಯನಿಧಿನಂಹವರು ಸಮಾಜದಲ್ಲಿ ವಿಷಬೀಜ ಬಿತ್ತುವ ಕೆಲಸ ಮಾಡಬಾರದು. ಕಾಂಗ್ರೆಸ್ ಮೈತ್ರಿಪಕ್ಷ ಡಿ.ಎಂ.ಕೆ ಹಾಗೂ ಐ.ಎನ್.ಡಿ.ಐ.ಎ ಮೈತ್ರಿಕೂಟ ಸನಾತನ ಧರ್ಮವಾದ ನಮ್ಮ ಹಿಂದುತ್ವದ ನಿರ್ಮೂಲನೆ ಬಗ್ಗೆ ಮಾತನಾಡುತ್ತಾ ದ್ವೇಷಿಸುತ್ತಿರುವುದು ಖಂಡನೀಯ ಸಂಗತಿ ಯಾಗಿದೆ.ನಮ್ಮ ಸಂಸ್ಕೃತಿ, ಸಂಪ್ರದಾಯ , ಪರಂಪರೆಗಳ ವಿರುದ್ಧವಿರುವ ಇಂತಹ ಮೈತ್ರಿಕೂಟ ದೇಶದ 80% ಹಿಂದೂ ಸನಾತನ ಧರ್ಮದವರನ್ನು ಅವಮಾನಿಸಿದ್ದಲ್ಲದೆ, ಧರ್ಮ-ಧರ್ಮಗಳ ನಡುವೆ ಕಿತ್ತಾಟ ಹಚ್ಚಲು ಯತ್ನಿಸುತ್ತಿದ್ದಾರೆ. ಇದರ ಪರಿಣಾಮ ದೇಶದ ಕೋಮು ಸಾಮರಸ್ಯಕ್ಕೆ ಧಕ್ಕೆಯಾಗಬಹುದು ಕೋಮು ಪ್ರಚೋದನೆಗಾಗಿಯೇ ಉದಯನಿಧಿ ಈ ಹೇಳಿಕೆ ನೀಡಿದ್ದಾರೆಂಬುದು ಸ್ಪಷ್ಟವಾಗುತ್ತಿದೆ.

ಹಿಂದು ಧರ್ಮ ನಾಶ ಮಾಡಲು ಬಂದವರೆ ನಾಶವಾದ ಇತಿಹಾಸವನ್ನು ನಿರಂತರ ಕಾಣಬಹುದು. ಸನಾತನ ಧರ್ಮ ಅನಾದಿಯಿಂದಲೂ ಇರುವಂತಹದ್ದು. ಇಂತಹ ಆಲದ ಮರ ಸರ್ವೇ ಜನೋ ಸುಖಿನೋಭವಂತು ಅಂತಾ ಸಾರಿ ಕೊಂಡು ಬಂದಿದೆ. ಇಂತಹ ಸನಾತನ ಧರ್ಮದ ಬಗ್ಗೆ ಹಗುರ ಹೇಳಿಕೆ ಸಹಿಸಲಾಗದು. ಹಿಂದೆ ತಮಿಳುನಾಡು ಸದನದಲ್ಲಿ ದಿವಂಗತ ಮಾಜಿ ಮುಖ್ಯಮಂತ್ರಿ ಕುಮಾರಿ ಜಯಲಲಿತಾ ಅವರನ್ನು ಅವಮಾನಿಸಿದ್ದ ನಿಮ್ಮ ತಾತನ ಪಕ್ಷ ಮತ್ತು ನಿಮ್ಮ ತಾತನ ಕಥೆಯನ್ನು ಕಾಲವೇ ಬರೆಯಿತು. ಕರ್ಮ ಯಾರನ್ನೂ ಬಿಡುವುದಿಲ್ಲ. ಸನಾತನ ಧರ್ಮದ ಬಗ್ಗೆ ಹಗುರ ಹೇಳಿಕೆ ನೀಡಿದ ಉದಯನಿಧಿಗೆ ಕಾಲವೇ ಪಾಠ ಕಲಿಸಲಿದೆ ಎಂದು ಅವರು ಹೇಳಿದ್ದಾರೆ.

# ಮಳೆ ಇಲ್ಲದೆ ನೊಂದಿರುವ ಭಕ್ತರಿಗೆ ಶಕ್ತಿ ತುಂಬುವಂತೆ ಮಾರಮ್ಮ ದೇವಿಯಲ್ಲಿ ಪ್ರಾರ್ಥನೆ: ರಘುಮೂರ್ತಿ



» ಚಳ್ಳಕೆರೆ

ಪ್ರಸ್ತುತ ವರ್ಷ ಚಳ್ಳಕೆರೆ ತಾಲ್ಲೂಕಿನಾದ್ಯಂತ ಸಮಯಕ್ಕೆ ಸರಿಯಾಗಿ ಮಳೆಬಾರದೆ ರೈತರ ಬೆಳೆಗಳು ಒಣಗಿದ್ದು, ರೈತರ ಬದುಕಿನಲ್ಲಿ ಸದ್ಯದ ಸ್ಥಿತಿಯಲ್ಲಿ ನೋವು ತುಂಬಿರುವ ಸಂದರ್ಭದಲ್ಲಿ ರೈತರ ಬದುಕಿನಲ್ಲಿ ನೆಮ್ಮದಿ ಸಂತೋಷ ನೀಡುವಂತೆ ಗೌರಸಮುದ್ರ ಶ್ರೀಮಾರಮ್ಮ ದೇವಿಯನ್ನು ಪ್ರಾರ್ಥಿಸಿರುವುದಾಗಿ ಎನ್.ರಘುಮೂರ್ತಿ ತಿಳಿಸಿದರು.

ಅವರು, ಶುಕ್ರವಾರ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಕಾರ್ಯಗಳನ್ನು ನೆರವೇರಿಸಿದ ನಂತರ ಪತ್ರಿಕೆಯೊಂದಿಗೆ ಮಾತನಾಡಿ, ಕಳೆದ ವರ್ಷ ತಾಲ್ಲೂಕಿನಾದ್ಯಂತ ನಿರೀಕ್ಷೆಗೂ ಮೀರಿ ಗುಡುಗು-ಸಿಡಿಲಿನಿಂದ ಕೂಡಿದ ಮಳೆಯಾಗಿತ್ತು. ಎಲ್ಲೆಲ್ಲೂ ನೀರಿನ ದೃಶ್ಯವೇ ಕಾಣಸಿಗತ್ತಿತ್ತು. ಬಹುತೇಕ ಕೆರೆ, ಕಟ್ಟೆಗಳು ತುಂಬಿದ್ದವು. ಆದರೆ, ಈ ಬಾರಿ ಪರಿಸ್ಥಿತಿ ವಿಭಿನ್ನವಾಗಿದ್ದರೂ ತಾಯಿ ಮಾರಮ್ಮ ಇಲ್ಲಿನ ಭಕ್ತರ ಮೇಲೆ ಕೃಪೆತೋರಬೇಕೆಂದು ಪೂಜೆ ಸಲ್ಲಿಸಲಾಗಿದೆ ಎಂದರು. ಗ್ರಾಮ ಪಂಚಾಯಿತಿ ಅಧ್ಯಕ್ಷ ಓಬಣ್ಣ, ಸದಸ್ಯ ಶಶಿಕುಮಾರ್, ಗೋಪಾಲ, ತಿಮ್ಮಾರೆಡ್ಡಿ ಮುಂತಾದವರು ಉಪಸ್ಥಿತರಿದ್ದರು.

# ಸ್ತ್ರೀಶಕ್ತಿ ಸ್ವಸಹಾಯ ಸಂಘದಲ್ಲಿ ಆಹಾರ ಅದಾಲತ್

» ಚಿತ್ರದುರ್ಗ

ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಚಿತ್ರದುರ್ಗ ವತಿಯಿಂದ ನಗರದ ಹನ್ನೊಂದನೆ ವಾರ್ಡ್ ಸೈಯದ್ ಸಾದತ್ ನಗರ ಸ್ತ್ರೀಶಕ್ತಿ ಸ್ವಸಹಾಯ ಸಂಘದಲ್ಲಿ ಆಹಾರ ಅದಾಲತ್ ಹಾಗೂ ಜಾಗೃತಿ ಸಮಿತಿ ಸಭೆಯನ್ನು ಏರ್ಪಡಿಸಲಾಗಿತ್ತು.

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅನ್ನಭಾಗ್ಯ ಯೋಜನೆ ಜಾರಿಗೆ ತಂದಿರುವುದು ನಮಗೆಲ್ಲಾ ಖುಷಿ ಕೊಟ್ಟಿದೆ. ಆದರೆ ಹಣ ಬದಲಿಗೆ ಅಕ್ಕಿ ಕೊಟ್ಟರೆ ಹೊಟ್ಟೆ ತುಂಬಾ ಊಟ ಮಾಡುತ್ತೇವೆ. ಅಕ್ಕಿ ಜೊತೆ ರಾಗಿ, ಸಕ್ಕರೆ, ಗೋಧಿ, ಎಣ್ಣೆ, ಬೇಳೆಯನ್ನು ನ್ಯಾಯಬೆಲೆ ಅಂಗಡಿಯಲ್ಲಿ ವಿತರಿಸಿದರೆ ಬಡವರಿಗೆ ಇನ್ನು ಅನುಕೂಲ ಎಂದು ಅನೇಕ ಮಹಿಳೆಯರು ತಮ್ಮ ಬೇಡಿಕೆಯನ್ನು ಆಹಾರ ನೀರಿಕ್ಷಕರಿಗೆ ಮಂಡಿಸಿದರು.

ಆಹಾರ ಅದಾಲತ್‌ನಲ್ಲಿ ಪಡಿತರ ಚೀಟಿದಾರರ ಕುಂದು ಕೊರತೆಗಳನ್ನು ಆಲಿಸಿ ಮಾತನಾಡಿದ ಆಹಾರ ನಿರೀಕ್ಷಕ ತಿಪ್ಪೇಶಪ್ಪ ಪ್ರತಿ ಮಾಹೆಯಲ್ಲಿ ಬಯೋಮೆಟ್ರಿಕ್ ಕೊಟ್ಟು ತಕ್ಷಣವೇ ಆಹಾರ ಧಾನ್ಯಗಳನ್ನು ಪಡೆಯಬೇಕು. ನ್ಯಾಯಬೆಲೆ ಅಂಗಡಿಗಳ ಮೂಲಕ ಸರ್ಕಾರ ಉತ್ತಮ ಗುಣಮಟ್ಟದ ಆಹಾರ ಧಾನ್ಯಗಳನ್ನು ಪೂರೈಸುತ್ತಿದ್ದು, ಪ್ರತಿದಿನ ಬೆಳಿಗ್ಗೆ 7 ರಿಂದ 12 ಗಂಟೆ ಹಾಗೂ ಸಂಜೆ ನಾಲ್ಕರಿಂದ ಎಂಟು ಗಂಟೆತನಕ ಪಡಿತರ ಧಾನ್ಯಗಳನ್ನು ವಿತರಿಸಲಾಗುವುದು. ನಿಮ್ಮ ಯಾವುದೆ ದೂರುಗಳು ಇದ್ದಲ್ಲಿ ಸೂಚನಾ ಫಲಕದಲ್ಲಿ ಹಾಕಲಾಗಿರುವ ನಿಶುಲ್ಕ ದೂರವಾಣಿ ಸಂಖ್ಯೆಗಳಿಗೆ ಕರೆ ಮಾಡಿ ನಮ್ಮ ಗಮನಕ್ಕೆ ತರಬಹುದು ಎಂದು ಎಚ್ಚರಿಸಿದರು.

ನಿಮ್ಮ ಮನವಿಯನ್ನು ಆಹಾರ ಇಲಾಖೆ ಮೂಲಕ ಸರ್ಕಾರಕ್ಕೆ ಸಲ್ಲಿಸಲಾಗುವುದು. ಎಲ್ಲಿ ಅನ್ನ ಅಕ್ಷರ ಹಣದ ಆಸೆಗೆ ಮಾರಾಟವಾಗುತ್ತದೋ ಅಲ್ಲಿ ಜೀವನ ಸರ್ವನಾಶವಾಗುತ್ತದೆ. ಹಾಗಾಗಿ ನ್ಯಾಯಬೆಲೆ ಅಂಗಡಿಗಳಿಂದ ನೀವುಗಳು ಪಡೆಯುವ ಅಕ್ಕಿಯನ್ನು ಮಾರಾಟ ಮಾಡಿಕೊಳ್ಳಬೇಡಿ. ಎಲ್ಲಿಯಾದರೂ ನೀವುಗಳು ಅಕ್ಕಿಯನ್ನು ಮಾರಾಟ ಮಾಡಿದ್ದು, ಕಂಡುಬಂದಲ್ಲಿ ಆರು ತಿಂಗಳ ಕಾಲ ಪಡಿತರ ಚೀಟಿಯನ್ನು ಅಮಾನತ್ತಿನಲ್ಲಿಟ್ಟು ದಂಡ ವಿಧಿಸಲಾಗುವುದು ಎಂದು ಆಹಾರ ನಿರೀಕ್ಷಕ ತಿಪ್ಪೇಶಪ್ಪ ಪಡಿತರ ಚೀಟಿದಾರರನ್ನು ಜಾಗೃತಿಗೊಳಿಸಿದರು.

ನಗರಸಭೆ ಮಾಜಿ ಉಪಾಧ್ಯಕ್ಷ ಎಂ.ಹನೀಫ್, ಕಬುಲಾ ಹುಸೇನ್ ಜಾಗೃತಿ ಸಮಿತಿ ಸಭೆಯಲ್ಲಿ ಭಾಗವಹಿಸಿದ್ದರು.

# ಅರ್ಜಿ ಆಹ್ವಾನ

» ಚಿತ್ರದುರ್ಗ

2023-24ನೇ ಸಾಲಿಗೆ ಅಲ್ಪಸಂಖ್ಯಾತರ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಸಮುದಾಯದ ಅಭ್ಯರ್ಥಿಗಳಿಗೆ 10 ತಿಂಗಳ ವಸತಿ ಸಹಿತ ಐಎಎಸ್, ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷಗಳಿಗೆ ಪರೀಕ್ಷಾ ಪೂರ್ವ ತರಬೇತಿ ನೀಡಲು ತಂತ್ರಾಂಶದ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಸೆಪ್ಟೆಂಬರ್ 16 ಅರ್ಜಿ ಸಲ್ಲಿಸಲು ಕೊನೆ ದಿನ. http://sevasindhu.karnataka.gov.in/sevasindhu/Departmentservices ವೆಬ್‌ಸೈಟ್ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.

## ಪ್ರಮುಖ ಸುದ್ದಿ

# ಆದರ್ಶ ಪತ್ತಿನ ಸಹಕಾರಿ ಸಂಘಕ್ಕೆ ರೂ.8 ಲಕ್ಷ ಲಾಭ

» ಚಿತ್ರದುರ್ಗ

ಆದರ್ಶ ಸೌಹಾರ್ದ ಪತ್ತಿನ ಸಹಕಾರಿ ಸಂಘ 2022-23 ನೇ ಸಾಲಿನಲ್ಲಿ ಎಂಟು ಲಕ್ಷ 49 ಸಾವಿರದ 772 ರೂ. ಗಳ ಲಾಭದಲ್ಲಿದೆ ಎಂದು ಸಂಘದ ಅಧ್ಯಕ್ಷ ಡಿ.ಆರ್.ತಿಪ್ಪೇಸ್ವಾಮಿ ತಿಳಿಸಿದರು.

ಐಶ್ವರ್ಯ ಫೋರ್ಟ್‌ನಲ್ಲಿ ಶನಿವಾರ ನಡೆದ ಆದರ್ಶ ಸೌಹಾರ್ದ ಪತ್ತಿನ ಸಹಕಾರಿ ಸಂಘದ ಹದಿನಾಲ್ಕನೆ ವರ್ಷದ ಸರ್ವ ಸದಸ್ಯರ ಮಹಾಸಭೆ ಉದ್ಘಾಟಿಸಿ ಮಾತನಾಡಿದರು.

ಕಾರ್ಯಕಾರಿ ಸಮಿತಿ ಹಾಗೂ ಸದಸ್ಯರುಗಳ ಪರಸ್ಪರ ಸಹಕಾರದಿಂದ ಕಳೆದ ಹದಿಮೂರು ವರ್ಷಗಳಿಂದಲೂ ಆದರ್ಶ ಸೌಹಾರ್ದ ಪತ್ತಿನ ಸಹಕಾರ ಸಂಘ ಸುಸೂತ್ರವಾಗಿ ನಡೆದುಕೊಂಡು ಬರುತ್ತಿದೆ. ಸಂಘದಿಂದ ಸಾಲ ಪಡೆಯುವ ಸದಸ್ಯರು ಸಕಾಲಕ್ಕೆ ಸರಿಯಾಗಿ ಪಾವತಿಸಬೇಕು. ಜಾಮೀನುದಾರರ ಮೇಲೆ ಸಾಲಗಾರರಷ್ಟೆ ಜವಾಬ್ದಾರಿಯಿದೆ. ಜಾಮೀನು ಆಗುವ ಪೂರ್ವದಲ್ಲಿ ಸಾಲಗಾರನ ವೈಯಕ್ತಿಕ ಸ್ಥಿತಿ, ಸಾಲದ ಉದ್ದೇಶ ಮತ್ತು ಸಾಲವನ್ನು ತೀರಿಸುವ ಶಕ್ತಿ ಇದೆಯೋ ಇಲ್ಲವೋ ಎನ್ನುವುದನ್ನು ಖಾತ್ರಿಪಡಿಸಿಕೊಳ್ಳಬೇಕು. ಒಮ್ಮೆ ಸಾಲಗಾರನು ಸುಸ್ತಿ ಬಾಕಿದಾರನಾದರೆ ಅದನ್ನು ತಿಳಿಸುವ ಹೊಣೆ ಜಾಮೀನುದಾರನದಾಗಿರುತ್ತದೆ. ಎಂಬುದನ್ನು ಗಮನದಲ್ಲಿಟ್ಟುಕೊಂಡು ಸಹಕಾರಿಗೆ ಧಕ್ಕೆ ಬಾರದಂತೆ ಸಾಲವನ್ನು ಮರುಪಾವತಿ ಮಾಡಿಸಬೇಕು ಎಂದು ಅಧ್ಯಕ್ಷ ಡಿ.ಆರ್.ತಿಪ್ಪೇಸ್ವಾಮಿ ಸೂಚಿಸಿದರು.ಸದಸ್ಯರು ಉಳಿತಾಯ ಖಾತೆ, ಪಿಗ್ಮಿ, ಸಾಲ ಪಡೆಯುವುದು ಹೀಗೆ ವ್ಯವಹರಿಸಬೇಕು. ಕಡಿಮೆ ಬಡ್ಡಿಯಲ್ಲಿ ಸಾಲ ಪಡೆದು ಮರುಪಾವತಿ ಮಾಡಿ ಆದರ್ಶ ಸೌಹಾರ್ದ ಪತ್ತಿನ ಸಹಕಾರಿ ಸಂಘದ ಅಭಿವೃದ್ದಿಗೆಕೈಜೋಡಿಸಬೇಕೆಂದುಅಧ್ಯಕ್ಷರು ಮನವಿ ಮಾಡಿದರು.ಉಳಿತಾಯ ಖಾತೆ, ಚಾಲ್ತಿ ಖಾತೆ, ನಿಶ್ಚಿತ ಠೇವಣಿ, ಕಲ್ಪವೃಕ್ಷ ಠೇವಣಿ, ಆವರ್ತಕ ಠೇವಣಿ, ಸುಮಂಗಲಿ ಠೇವಣಿ, ಜಂಟಿ ಕಂತು ಸಾಲಗಳು, ವಾಹನ, ಆಭರಣ, ಎನ್.ಎಸ್.ಸಿ. ಮನೆ/ನಿವೇಶನ, ಪಿಗ್ಮಿ ಠೇವಣಿ, ವೇತನ ಆಧಾರಿತ ಹಾಗೂ ಗೃಹೋಪಯೋಗಿ ಸಾಲ ಸೌಲಭ್ಯಗಳಿವೆ.



ಉಳಿತಾಯ ಖಾತೆಯಲ್ಲಿ ಕನಿಷ್ಟ ಎರಡು ತಿಂಗಳಿಗೆ ಒಂದರಂತೆ ಒಂದು ವರ್ಷದಲ್ಲಿ ಆರು ವಹಿವಾಟು ನಡೆಸಿರಬೇಕು. ಚಾಲ್ತಿ ಖಾತೆಯಲ್ಲಿ ಕನಿಷ್ಟ ತಿಂಗಳಿಗೆ ಒಂದರಂತೆ ವರ್ಷದಲ್ಲಿ ಹನ್ನೆರಡು ವಹಿವಾಟು ನಡೆಸಿರಬೇಕು. ಈ ನಿಯಮಗಳಲ್ಲಿ ಕನಿಷ್ಟ ಒಂದನ್ನಾದರೂ ಪ್ರತಿ ವರ್ಷ ಪಾಲಿಸದ ಸದಸ್ಯರು ಸಭೆ, ಚುನಾವಣೆಗಳಲ್ಲಿ ಪಾಲ್ಗೊಳ್ಳಲು ಮತ್ತು ಮತ ಚಲಾಯಿಸಲು ಅನರ್ಹರು. ಕಾಯ್ದೆಯ ಪ್ರಕರಣ 20 ರ ಅನ್ವಯ ಸದಸ್ಯರಾಗಿ ಮುಂದುವರೆಯಲು ಅನರ್ಹರಾಗಿರುತ್ತಾರೆ. ಡಿವಿಡೆಂಟ್ ಹಣವನ್ನು ಪಡೆಯದೆ ಇರುವವರು ತೆಗೆದುಕೊಳ್ಳತಕ್ಕದ್ದು. ಇಲ್ಲವಾದಲ್ಲಿ ಮೂರು ವರ್ಷದ ನಂತರ ಕಾಯ್ದಿಟ್ಟ ನಿಧಿಗೆ ವರ್ಗಾಯಿಸಲಾಗುವುದು. ಸದಸ್ಯರು ಮಹಾಸಭೆಯಲ್ಲಿ ನಿರಂತರವಾಗಿ ಮೂರು ವರ್ಷ ಪಾಲ್ಗೊಳ್ಳದಿದ್ದಲ್ಲಿ ಸದಸ್ಯತ್ವ ರದ್ದಾಗಲಿದೆ ಎಂದು ಆದರ್ಶ ಸೌಹಾರ್ದ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಡಿ.ಆರ್.ತಿಪ್ಪೇಸ್ವಾಮಿ ಸದಸ್ಯರುಗಳ ಗಮನಕ್ಕೆ ತಂದರು. ಆದರ್ಶ ಸೌಹಾರ್ದ ಪತ್ತಿನ ಸಹಕಾರಿ ಸಂಘದ ಉಪಾಧ್ಯಕ್ಷ ಚಂದ್ರಶೇಖರ್, ನಿರ್ದೇಶಕರುಗಳಾದ ಜೆ.ಮಧುಸೂದನ, ಎಸ್.ವೇದಮೂರ್ತಿ, ವಿ.ಎಸ್.ಮಲ್ಲಿಕಾರ್ಜುನಸ್ವಾಮಿ, ಜಿ.ಎ.ಪ್ರಸನ್ನಕುಮಾರ್, ಎಂ.ಕೆ. ಮಲ್ಲಿಕಾರ್ಜುನ್, ಎಸ್.ಮೂರುಕಣ್ಣಪ್ಪ, ಎಂ.ವೆಂಕಟೇಶ್ ವೇದಿಕೆಯಲ್ಲಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T